# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 131 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 10–12–2024 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 02 Issue - 131 | RNI No: KARKAN/2023/88462 | Chitradurga | Date: 10-12-2024 Tuesdayy | Page: 4 | Price: Rs. 2-00



ಒಳಪುಟದ ಸುದ್ದಿಗಳು
ಬಯಲು ಮಲವಿಸರ್ಜನೆ ನಿಲ್ಲಿಸಿ, ಜಂತುಹುಳು ಬಾಧೆಯಿಂದ ನಿವಾರಣೆ ಪಡೆಯಿರಿ: ಟಿಎಚ್‌ಓ 2
ವಾಹನ ಸವಾರರು ಸಂಚಾರಿ ನಿಯಮ ಕಡ್ಡಾಯವಾಗಿ ಪಾಲಿಸಿ: ಜಿಲ್ಲಾಧಿಕಾರಿ 3
ಡಿಸೆಂಬರ್ 9 ವಿಶ್ವ ಭ್ರಷ್ಟಾಚಾರ ವಿರೋಧಿ ದಿನ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಇಂದು ಎಸ್.ನಿಜಲಿಂಗಪ್ಪ 123ನೇ ಜನ್ಮದಿನಾಚರಣೆ

**ಚಿತ್ರದುರ್ಗ:** ಎಸ್. ನಿಜಲಿಂಗಪ್ಪ ಮೆಮೋರಿಯಲ್ ಟ್ರಸ್ಟ್ (ರಿ) ಸೀಬಾರ, ಚಿತ್ರದುರ್ಗ ತಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ಇವರ ಸಂಯುಕ್ತ ಆಶ್ರಯದಲ್ಲಿ ಸ್ವಾತಂತ್ರ್ಯ ಹೋರಾಟಗಾರರು, ಕರ್ನಾಟಕ ಏಕೀಕರಣರೂವಾರಿ,ಕರ್ನಾಟಕಶಿಲ್ಪಿರಾಷ್ಟ್ರನಾಯಕ ಎಸ್. ನಿಜಲಿಂಗಪ್ಪ ಅವರ ನೂರ ಇಪ್ಪತ್ತೂರನೇ ಜನ್ಮದಿನಾಚರಣೆಯ ಅಂಗವಾಗಿ ಡಿ. 10ರ ಮಂಗಳವಾರದಂದು ಸಿಬಾರದ ಬಳಿಯ ಎಸ್. ಎನ್ ಸ್ಮಾರಕದ ಅವರಣದ "ಪುಣ್ಯಭೂಮಿಯಲ್ಲಿ ಪುಷ್ಪ ನಮನ ಕಾರ್ಯಕ್ರಮವನ್ನು ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ ಎಂದು ಎಸ್.ಎನ್. ಮೆಮೋರಿಯಲ್ ಟ್ರಸ್(ರಿ)ನ ಸಂಯೋಜಕರು ಹಾಗೂ ಟ್ರಸ್ಟಿಗಳಾದ ಎಸ್. ಷಣ್ಮುಖಪ್ಪ ತಿಳಿಸಿದ್ದಾರೆ. ಕಾರ್ಯಕ್ರಮದ ಸಾನಿಧ್ಯವನ್ನು ಯೋಗವನ ಬೆಟ್ಟದ ಅಧ್ಯಕ್ಷರು. ಹಾಗೂ ಎಸ್.ಜೆ.ಎಂ. ಬೃಹನ್ಮಠ ಹಾಗೂ ವಿದ್ಯಾಪೀಠದ ಆಡಳಿತ ಮಂಡಳಿ ಸದಸ್ಯರಾದ ಶ್ರೀ ಬಸವಕುಮಾರ ಸ್ವಾಮಿಗಳು, ಮಾದಾರ ಚನ್ನಯ್ಯ ಗುರುಪೀಠದ ಪೀಠಾಧ್ಯಕ್ಷರಾದ ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮಿಗಳು ವಹಿಸಲಿದ್ದಾರೆ. ಮಾಜಿ ಸಂಸದರು, ಎಸ್.ಎನ್. ಮೆಮೋರಿಯಲ್ ಟ್ರಸ್(ರಿ)ನ ಗೌರವ ಕಾರ್ಯದರ್ಶಿ ಹೆಚ್. ಹನುಮಂತಪ್ಪ, ವಿಶ್ರಾಂತ ಮುಖ್ಯ ವಾಸ್ತುಶಿಲ್ಪಿ, ಹಾಗೂ ಎಸ್.ಎನ್.ಟ್ರಸ್ಟ್. ಉಪಾಧ್ಯಕ್ಷರಾದ ಪ್ರೊ: ಎಸ್.ಎನ್. ಕಿರಣ್ ಶಂಕರ್ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರು ಹಾಗೂ. ಎಸ್.ಎನ್. ಮೆಮೋರಿಯಲ್ ಟ್ರಸ್‌ನ ಟ್ರಸ್ಟಿಗಳಾದ ಎಂ.ಕೆ. ತಾಜ್ ಪೀರ್ ಭಾಗವಹಿಸಲಿದ್ದಾರೆ.

### ಡಿ.10ರಂದು ಶಿಕ್ಷಕರ ಸಹ-ಪಠ್ಯ ಚಟುವಟಿಕೆಗಳ ಸ್ಪರ್ಧಾ ಕಾರ್ಯಕ್ರಮ

**ಚಿತ್ರದುರ್ಗ:** ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಇದೇ ಡಿಸೆಂಬರ್ 10ರಂದು ಬೆಳಿಗ್ಗೆ 10ಕ್ಕೆ ನಗರದ ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ 2024–25ನೇ ಸಾಲಿನ ಜಿಲ್ಲಾಮಟ್ಟದ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ಸಹ–ಪಠ್ಯ ಚಟುವಟಿಕೆಗಳ ಸ್ಪರ್ಧಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜಿಲ್ಲಾಮಟ್ಟದ ಪ್ರಾಥಮಿಕ, ಪ್ರೌಢಶಾಲಾ ಶಿಕ್ಷಕರಿಗೆ ಪ್ರತ್ಯೇಕ ವಿಭಾಗದಲ್ಲಿ ಭಾವಗೀತೆ, ಆಶುಭಾಷಣ ಸ್ಪರ್ಧೆ, ಪ್ರಬಂಧ ಸ್ಪರ್ಧೆ, ಸ್ಥಳದಲ್ಲಿ ಪಾಠೋಪಕರಣ (ಟಿಎಲ್‌ಎಂ) ತಯಾರಿಕೆ ಸ್ಪರ್ಧೆ, ಸ್ಥಳದಲ್ಲೇ ಚಿತ್ರ ಬರೆಯುವ ಸ್ಪರ್ಧೆ, ರಸಪ್ರಶ್ನೆ ಸ್ಪರ್ಧೆ (ಸಾಮಾನ್ಯ), ರಸಪ್ರಶ್ನೆ ಸ್ಪರ್ಧೆ (ವಿಜ್ಞಾನ) ಸಹ–ಪಠ್ಯ ಚಟುವಟಿಕೆಗಳ ಸ್ಪರ್ಧಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

ವಿಧಾನಮಂಡಲದ ಚಳಿಗಾಲದ ಅಧಿವೇಶನ

# ಚಳ್ಳಕೆರೆ ನಗರಕ್ಕೆ ಯುಜಿಡಿ ಕಲ್ಪಿಸಲು 260 ಕೋಟಿ ಅನುದಾನಕ್ಕೆ ಶಾಸಕ ಟಿ. ರಘುಮೂರ್ತಿ ಮನವಿ

» **ಬೆಳಗಾವಿ ಸುವರ್ಣ ವಿಧಾನಸೌಧ (ವಿಧಾನಸಭೆ)**

ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ನಗರವು ಬೆಳೆಯುತ್ತಿರುವ ವೇಗಕ್ಕೆ ಅನುಗುಣವಾಗಿ, ನಗರಕ್ಕೆ ಅಗತ್ಯ ಮೂಲಭೂತ ಸೌಕರ್ಯ ಕಲ್ಪಿಸುವ ನಿಟ್ಟಿನಲ್ಲಿ ಒಳಚರಂಡಿ ವ್ಯವಸ್ಥೆ (ಯುಜಿಡಿ) ನಿರ್ಮಾಣಕ್ಕೆ ಅಗತ್ಯವಿರುವ 260 ಕೋಟಿ ರೂ. ಅನುದಾನವನ್ನು ಒದಗಿಸುವಂತೆ ಚಳ್ಳಕೆರೆ ಶಾಸಕ ಟಿ. ರಘುಮೂರ್ತಿ ಮನವಿ ಮಾಡಿದರು.

ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಸೋಮವಾರ ಪ್ರಾರಂಭವಾದ ವಿಧಾನಮಂಡಲದ ಚಳಿಗಾಲದ ಅಧಿವೇಶನದಲ್ಲಿ ವಿಧಾನಸಭೆಯಲ್ಲಿ ಗಮನ ಸೆಳೆಯುವ ಸೂಚನೆಯಡಿ ಶಾಸಕ ಟಿ. ರಘುಮೂರ್ತಿ ಅವರು ಈ ಮನವಿ ಮಾಡಿದರು.



ಚಳ್ಳಕೆರೆ ಕ್ಷೇತ್ರದಲ್ಲಿ ನಾನು ಮೂರು ಬಾರಿ ಶಾಸಕನಾಗಿದ್ದೇನೆ. ಚಳ್ಳಕೆರೆ ನಗರ ವೇಗವಾಗಿ ಬೆಳೆಯುತ್ತಿದ್ದು, ನಗರಕ್ಕೆ ಉತ್ತಮ ಮೂಲಭೂತ ಸೌಲಭ್ಯ ಕಲ್ಪಿಸುವುದು ನನ್ನ ಆಶಯವಾಗಿದೆ. ಚಳ್ಳಕೆರೆ ನಗರಕ್ಕೆ ಒಳಚರಂಡಿ ವ್ಯವಸ್ಥೆ (ಯುಜಿಡಿ) ಕಲ್ಪಿಸಲು 2013 ರಲ್ಲಿಯೇ ಪ್ರಸ್ತಾಪಿಸಲಾಗಿತ್ತು. ಬಳಿಕ 2021 ರಲ್ಲಿ ಈ ಯೋಜನೆಗೆ 197 ಕೋಟಿ ರೂ. ಗಳ ಅಂದಾಜು ಮಾಡಲಾಗಿತ್ತು. ಇದೀಗ ಯೋಜನೆಯ ವೆಚ್ಚ 253 ಕೋಟಿ ರೂ. ಆಗಿದೆ. ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು, ಪ್ರಸ್ತುತ ಯೋಜನೆಯ ಜಾರಿಗೆ ಮತ್ತೊಮ್ಮೆ ಪ್ರಸ್ತಾವನೆ ಸಲ್ಲಿಸುವಂತೆ ತಿಳಿಸಿದ ಹಿನ್ನೆಲೆಯಲ್ಲಿ, ಈಗ ಮತ್ತೊಮ್ಮೆ ಮನವಿ ಸಲ್ಲಿಸುತ್ತಿದ್ದೇನೆ ಎಂದರು. ಇದಕ್ಕೆ ಉತ್ತರ ನೀಡಿದ ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವ ಭೈರತಿ ಸುರೇಶ್ ಅವರು, 2015 ರಲ್ಲಿ ಈ ಯೋಜನೆ 100 ಕೋಟಿ ರೂ. ಗಳ ವೆಚ್ಚದಲ್ಲಿ ಆಗಲಿದೆ ಎಂದು ಅಂದಾಜಿಸಲಾಗಿತ್ತು. ಆದರೆ ಇದೀಗ ಸುಮಾರು 260 ಕೋಟಿ ರೂ. ಗಳ ವೆಚ್ಚದ ಅಂದಾಜು ಮಾಡಲಾಗಿದೆ. ಹೀಗಾಗಿ ಹಣಕಾಸು ಇಲಾಖೆಯ ಸಲಹೆ ಪಡೆದು, ಹಣಕಾಸಿನ ಲಭ್ಯತೆ ನೋಡಿಕೊಂಡು, ಯೋಜನೆ ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಶಾಸಕ ಟಿ. ರಘುಮೂರ್ತಿ ಅವರು ಮುಖ್ಯಮಂತ್ರಿಗಳೇ ಯೋಜನೆಯ ಜಾರಿಗೆ ಆಸಕ್ತಿ ತೋರಿದ್ದು, ಮುಖ್ಯಮಂತ್ರಿಗಳು ಈ ಯೋಜನೆ ಸಾಕಾರಗೊಳಿಸಲು ವಿಶೇಷ ಅನುದಾನ ಬಿಡುಗಡೆ ಮಾಡುವಂತೆ ಮನವಿ ಮಾಡಿದರು.

# ರೈತ ಮುಖಂಡ ಸೋಮಗುದ್ದುರಂಗಸ್ವಾಮಿ ವಿರುದ್ಧ ಅಪಪ್ರಚಾರ ಸಲ್ಲದು: ನಾಗರಾಜ

» **ಚಳ್ಳಕೆರೆ**

ಕಳೆದ ಸುಮಾರು ಐದು ದಶಕಗಳಿಂದ ಪ್ರಥಮ ಬಾರಿಗೆ ಚಿತ್ರದುರ್ಗ ಜಿಲ್ಲೆಗೆ ಭದ್ರಾ ಮೇಲ್ದಂಡೆ ಯೋಜನೆ ಜಾರಿಕುರಿತು ಹೋರಾಟ ನಡೆಸಿ ಅಂದಿನಿಂದ ಇಂದಿನವರೆಗೂ ರೈತರ ಕಲ್ಯಾಣಕ್ಕಾಗಿ ಶ್ರಮಿಸಿದ ರೈತ ಸಂಘದ ಹಿರಿಯ ಮುಖಂಡ, ಅಖಂಡ ಕರ್ನಾಟಕ ರೈತ ಸಂಘದ ಸಂಸ್ಥಾಪಕ ಅಧ್ಯಕ್ಷ ಸೋಮಗುದ್ದುರಂಗಸ್ವಾಮಿ ವಿರುದ್ಧ ಕೆಲವು ವ್ಯಕ್ತಿಗಳು ದುರುದ್ದೇಶದಿಂದ ಅನಗತ್ಯ ಭಾಷೆಗಳನ್ನು ಸಾಮಾಜಿಕ ಜಾಲತಾಣದಲ್ಲಿ ಟೀಕೆ ಮಾಡುವುದು ಸರಿಯಲ್ಲವೆಂದು ಕಿಸಾನ್ ಸಂಘದ ಜಿಲ್ಲಾಧ್ಯಕ್ಷ ಎ.ನಾಗರಾಜ ಅಸಮದಾನ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಪತ್ರಿಕೆಯೊಂದಿಗೆ ಮಾತನಾಡಿದ ಅವರು, ಇಂದು ಚಳ್ಳಕೆರೆ ತಾಲ್ಲೂಕಿಗೆ ಸಮೃದ್ಧ ನೀರಾವರಿ ವ್ಯವಸ್ಥೆಯಾಗಿದ್ದು, ಕ್ಷೇತ್ರ ಶಾಸಕ ಟಿ.ರಘುಮೂರ್ತಿ ಸೇರಿದಂತೆ ಅನೇಕ ರೈತ ಸಂಘಟನೆ, ಸಂಘ ಸಂಸ್ಥೆ, ವಿವಿಧ ಸಂಘಟನೆಗಳ ಹೋರಾಟ ಹಾಗೂ ಸಹಕಾರ ಇದಕ್ಕೆ ಪ್ರಮುಖ ಕಾರಣವಾಗಿದೆ. ಯಾವುದೇ ವ್ಯಕ್ತಿಯನ್ನು ಟೀಕಿಸುವ ಮೊದಲು ಅವರು ಸಮಾಜಕ್ಕೆ ಮಾಡಿರುವ ಸೇವೆಯನ್ನು ಗುರುತಿಸಬೇಕಾಗಿದೆ. ಅನಗತ್ಯವಾಗಿ ಯಾವುದೇ ವ್ಯಕ್ತಿಯ ವಿರುದ್ಧ ಟೀಕೆ ಮಾಡುವುದು ಸರಿಯಲ್ಲವೆಂದರು.



ಈ ಸಂದರ್ಭದಲ್ಲಿ ಅಖಂಡ ಕರ್ನಾಟಕ ರೈತ ಸಂಘದ ಸಂಸ್ಥಾಪಕ ಅಧ್ಯಕ್ಷ ಸೋಮಗುದ್ದು ರಂಗಸ್ವಾಮಿ, ಗಿರಿಧರ್, ಕೃಷ್ಣಮೂರ್ತಿ, ರಾಜು, ಶಿವಣ್ಣ, ಸ್ವಾಮಿ, ವೆಂಕಟರಮಣಪ್ಪ ಮುಂತಾದವರು ಉಪಸ್ಥಿತರಿದ್ದರು.

### ಜಾನುವಾರು ಗಣತಿಯ ಪೋಸ್ಟರ್ಸ್ ಬಿಡುಗಡೆ ಮಾಡಿದ ಶಾಸಕರು




**ಹೊಸದುರ್ಗ:** ಪ್ರತಿ ವರ್ಷದಂತೆ ಈ ವರ್ಷವೂ ಸಹಾ ತಾಲೂಕಿನಾದ್ಯಂತ ಜಾನುವಾರುಗಳ ಗಣತಿ ನಡೆಯಲಿದ್ದು ಈ ಗಣತಿ ಕಾರ್ಯಕ್ರಮಕ್ಕೆ ಶಾಸಕ ಬಿ.ಜಿ.ಗೋವಿಂದಪ್ಪ ಪಟ್ಟಣದ ಪಶು ಸಂಗೋಪನಾ ಇಲಾಖೆಯ ಆವರಣದಲ್ಲಿ 21ನೇ ಜಾನುವಾರು ಗಣತಿಯ ಪೋಸ್ಟರ್ಸ್ ಬಿಡುಗಡೆ ಮಾಡಿದರು. ಈ ಸಂಧರ್ಬದಲ್ಲಿ ಮಾತನಾಡಿದ ಪಶು ಇಲಾಖೆಯ ಸಹಾಯಕ ನಿರ್ದೇಶಕ ಡಾ: ಕಿರಣ್ ಜಾನುವಾರು ಗಣತಿಯಲ್ಲಿ ಪ್ರತಿಯೊಂದು ಮನೆ,ಉದ್ಯಮ,ಸಂಸ್ಥೆಗಳಿಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಲಾಗುವುದು. ಗಣತಿಯಲ್ಲಿ ಸಾಕು ಪ್ರಾಣಿಗಳು , ಕುಕ್ಕುಟಗಳು, ಹಾಗೂ ಬೀದಿ ನಾಯಿಗಳು ಮತ್ತು ಬೀದಿ ದನಗಳ ಮಾಹಿತಿಯನ್ನು ಸಂಗ್ರಹಿಸಲಾಗುವುದು,ಎಲ್ಲಾ ಮಾಹಿತಿಯನ್ನು ಮೊಬೈಲ್ ಆ್ಯಪ್ ಮುಖಾಂತರ ಸಂಗ್ರಹಿಸಲಾಗುವುದು ಎಂದು ತಿಳಿಸಿದ ಅವರು ಜಾನುವಾರು ಗಣತಿಯ ಸಮಗ್ರ ಮಾಹಿತಿಂ ಸರ್ಕಾರವು ಪಶು ಸಂಗೋಪನೆ ಯೋಜನೆಗಳನ್ನು ರೂಪಿಸಲು ಬಹುಮುಖ್ಯ ಪಾತ್ರ ವಹಿಸುತ್ತದೆ ಎಂದರು.

## ಪ್ರಮುಖ ಸುದ್ದಿ

### ಕರಾವಳಿ ಪ್ರದೇಶದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಬೆಳೆಯಲಾಗುತ್ತಿರುವ ಗೋಡಂಬಿ ಬೆಳೆ ಚಿತ್ರದುರ್ಗ ಜಿಲ್ಲೆಗೂ ವಿಸ್ತರಿಸಿದೆ

# ಗೋಡಂಬಿ ಬೆಳೆ ಬರದನಾಡು ಕೋಟೆನಾಡಿಗೆ ಎಂಟ್ರಿ

ಗೋಡಂಬಿ ನಮ್ಮ ಜಿಲ್ಲೆಯ ಹವಾಗುಣಕ್ಕೆ ಹೊಂದಿಕೊಳ್ಳುವ ಹಾಗೂ ಕಡಿಮೆ ನೀರು ಬೇಡುವ ಬೆಳೆಯಾಗಿದ್ದು ಒಣ ಭೂಮಿಗೂ ಸೂಕ್ತವಾಗಿದೆ. ಅತ್ಯಂತ ಕಡಿಮೆ ಮಳೆ ಬೀಳುವ ಪ್ರದೇಶದಲ್ಲೂ ಗೋಡಂಬಿ ಬೆಳೆ ಯಶಸ್ಸು ಕಂಡಿದೆ. ಜಿಲ್ಲೆಯಲ್ಲಿ ಈಗಾಗಲೇ ನೂರಾರು ರೈತರು ಗೋಡಂಬಿ ಬೆಳೆಯುತ್ತಿದ್ದು ಬರದ ನಾಡಿಗೆ ಬಂಗಾರದ ಬೆಳೆಯಾಗುವ ಎಲ್ಲಾ ಲಕ್ಷಣಗಳು ಗೋಚರಿಸುತ್ತಿವೆ.

ನಾಲ್ಕೈದು ವರ್ಷಗಳ ಹಿಂದೆ ಒಂದಿಬ್ಬರು ರೈತರು ಮಾತ್ರ ಗೋಡಂಬಿ ಬೆಳೆಯುತ್ತಿದ್ದರು. ಶಿವಮೊಗ್ಗದ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಕೇಂದ್ರ ಸರಕಾರದ ಕೊಚ್ಚಿನ್‌ನ ಗೋಡಂಬಿ ಮತ್ತು ಕೋಕೋ ಅಭಿವೃದ್ಧಿ ನಿರ್ದೇಶನಾಲಯದ ಮೂಲಕ ರೈತರಿಗೆ ಗೋಡಂಬಿ ಸಸಿಗಳನ್ನು ಉಚಿತವಾಗಿ ಕೊಡಲು ಆರಂಭಿಸಿದ್ದು ರೈತರು ಗೋಡಂಬಿ ಬೆಳೆಯಲು ಉತ್ಸುಕರಾಗಿದ್ದಾರೆ.

ಕಳೆದ ಆರು ತಿಂಗಳ ಹಿಂದೆ ಸುಮಾರು 50 ರೈತರಿಗೆ ತಲಾ 200 ರಂತೆ ಒಟ್ಟು 10 ಸಾವಿರ ಸಸಿಗಳನ್ನು ವಿತರಿಸಲಾಗಿತ್ತು. ಇನ್ನೂ 50 ರೈತರಿಂದ ಬೇಡಿಕೆ ಇದೆ. ಜಿಲ್ಲೆಯ ಚಳ್ಳಕೆರೆ ತಾಲೂಕಿನಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಗೋಡಂಬಿ ಬೆಳೆಯಲಾಗುತ್ತಿದೆ. ಕಳೆದ ಮೂ[illegible]ನಾಲ್ಕು ವರ್ಷಗಳಿಂದ ಚಳ್ಳಕೆರ ತಾಲೂಕು ಒಂದರಲ್ಲೇ 70 ರಿಂದ 80 ರೈತರು ಸುಮಾರು 100 ಹೆಕ್ಟೇರ್‌ಗೂ ಹೆಚ್ಚು ವಿಸ್ತೀರ್ಣದಲ್ಲಿ ಗೋಡಂಬಿ ಬೆಳೆಯುತ್ತಿದ್ದಾರೆ.







ಹಿರಿಯೂರಿನ ಬಬ್ಬೂರು ಕೃಷಿ ವಿಜ್ಞಾನ ಕೇಂದ್ರದಲ್ಲಿ ಗೋಡಂಬಿ ಬೆಳೆಗೆ ಸಂಬಂಸಿದಂತೆ ಈಗಾಗಲೇ ಸಂಶೋಸಿರುವ ಎಲ್ಲ ತಳಿಗಳ ಸಸ್ಯ ಅಭಿವೃದ್ಧಿ ಮಾಡಲು ಯೋಜನೆ ರೂಪಿಸಲಾಗಿದ್ದು, 2-3 ತಿಂಗಳಲ್ಲಿ ಟೇಕಾಫ್ ಆಗಲಿದೆ. ಬಬ್ಬೂರಿನಲ್ಲಿ ಸುಮಾರು ಎರಡೂವರೆ ಎಕರೆಯಲ್ಲಿ ಮದರ್ ಪ್ಲಾಂಟ್ ನರ್ಸರಿ ಸಿದ್ಧವಾಗುತ್ತಿದೆ. ಇದರಲ್ಲಿ ಹತ್ತು ತಳಿಗಳ ಸುಮಾರು 300 ಸಸಿಗಳನ್ನು ನಾಟಿ ಮಾಡಲಾಗುತ್ತದೆ. ಎರಡೂ ವರ್ಷಗಳ ನಂತರ ಕಸಿ ಕಟ್ಟಿ ಸಸಿಗಳನ್ನು ಮಾರಾಟ ಮಾಡಲಾಗುತ್ತದೆ. ರೈತರಿಗೆ ಸಸಿಗಳು ಬೇಕಾದರೆ ಮುಂದಿನ ವರ್ಷದಿಂದ ಶಿವಮೊಗ್ಗದ ಬಾವಿಕೆರೆಯ ಫಾರಂನಿಂದ ತರಿಸಿಕೊಡಲಾಗುವುದು. ತಲಾ 25 ಅಡಿ ಅಂತರದಲ್ಲಿ ಗಿಡಗಳನ್ನು ನಾಟಿ ಮಾಡಲಾಗುತ್ತದೆ.

» **ಡಾ.ಶರಣಪ್ಪ ಜಂಗಂಡಿ, ಸಹ ಸಂಶೋಧನಾ ನಿರ್ದೇಶಕರು, ಬಬ್ಬೂರು ಫಾರಂ, ಹಿರಿಯೂರು**

ಗೋಡಂಬಿ ಸಸಿಗಳಿಗೆ ಮೂರು ವರ್ಷ ಸಮರ್ಪಕವಾಗಿ ನೀರು ಒದಗಿಸಿದರೆ ನಂತರ ಅಷ್ಟಾಗಿ ನೀರು ಕೇಳಲ್ಲ, ಮೂರನೇ ವರ್ಷದಿಂದ ಫಲ ಕೊಡುತ್ತದೆ. ನವೆಂಬರ್, ಡಿಸೆಂಬರ್ ತಿಂಗಳಲ್ಲಿ ಹೂವು ಬಿಡಲು ಪ್ರಾರಂಭವಾಗಲಿದೆ. ಏಪ್ರಿಲ್, ಮೇ ತಿಂಗಳಲ್ಲಿ ಕಟಾವು ಬರಲಿದೆ. ಕರಾವಳಿ ಭಾಗದಲ್ಲಿ ಮಾರ್ಚ್ ತಿಂಗಳಿಂದಲೇ ಪ್ರಾರಂಭವಾಗಿ ಏಪ್ರಿಲ್, ಮೇ ತಿಂಗಳಲ್ಲಿ ಕಟಾವು ಮಾಡಲಾಗುತ್ತದೆ. ಗಿಡದಿಂದ ಗಿಡಕ್ಕೆ 15 ಅಡಿ ಅಂತರದಲ್ಲಿ ನಾಟಿ ಮಾಡಬೇಕು, ಛತ್ರಿ ಆಕಾರದಲ್ಲಿ ಬೆಳೆದರೆ ಚೆನ್ನಾಗಿ ಇಳುವರಿ ಲಭಿಸಲಿದೆ. ಚೆನ್ನಾಗಿ ನಿರ್ವಹಣೆ ಮಾಡಿದರೆ 30 ವರ್ಷದವರೆಗೆ ಲೈಫ್ ಇರುತ್ತದೆ.

» **ಡಾ.ಸುನಿಲ್, ಸಂಯೋಜಕರು, ಗೋಡಂಬಿ ತಂತ್ರಜ್ಞಾನ ಕೇಂದ್ರ, ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕೆ ವಿವಿ**



ಕೊಚ್ಚಿನ್‌ನ ಗೋಡಂಬಿ ಮತ್ತು ಕೋಕೋ ಅಭಿವೃದ್ಧಿ ನಿರ್ದೇಶನಾಲಯದ ಮೂಲಕ ಗೋಡಂಬಿ ಮತ್ತು ಕೋಕೋ ಅಭಿವೃದ್ಧಿ ಪಡಿಸಲು ಹಣಕಾಸಿನ ಸೌಲಭ್ಯ ಒದಗಿಸಲಾಗುತ್ತಿದೆ. ಚಿತ್ರದುರ್ಗ ಜಿಲ್ಲೆಯಲ್ಲಿ ಗೋಡಂಬಿ ಬೆಳೆ ಪರಿಚಯಿಸಲು ಪ್ರಯತ್ನಿಸಲಾಗುತ್ತಿದೆ. ದೇಶದ 19 ರಾಜ್ಯಗಳ 11 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಗೋಡಂಬಿ ಬೆಳೆಯಲಾಗುತ್ತಿದೆ. ಆದರೆ ಕೇವಲ 7.5 ಲಕ್ಷ ಟನ್ ಉತ್ಪಾದನೆ ಆಗುತ್ತಿದೆ. ನಾಲ್ಕು ಸಾವಿರ ಸಂಸ್ಕರಣ ಘಟಕಗಳಿದ್ದು, ಅಗತ್ಯವಾಗಿ ಬೇಕಾದ 16 ಲಕ್ಷ ಮೆಟ್ರಿಕ್ ಟನ್ ಕಚ್ಚಾ ಬೀಜವನ್ನು ಬೇರೆ ಬೇರೆ ದೇಶಗಳಿಂದ ಆಮದು ಮಾಡಿಕೊಳ್ಳಲಾಗುತ್ತಿದೆ. ಇದಕ್ಕಾಗಿ 8 ಸಾವಿರ ಕೋಟಿ ಖರ್ಚು ಮಾಡಲಾಗುತ್ತಿದೆ. 2001ರಲ್ಲಿ ಈ ಕಚ್ಚಾ ಬೀಜದ ಬೆಲೆ 30 ರೂ. ಇದ್ದು, ಈಗ 140 ರಿಂದ 150 ರೂ.ಗೆ ದಾಟಿದೆ.

## ಫಾಸ್ಟ್ ನ್ಯೂಸ್

### ನಗರದಲ್ಲಿಂದು ಮಾನವ ಹಕ್ಕುಗಳ ದಿನಾಚರಣೆ

» ದಾವಣಗೆರೆ

ನಗರದ ಆರ್.ಎಲ್.ಕಾನೂನು ಕಾಲೇಜು, ಜಿಲ್ಲಾಡಳಿತ, ಮಾನವ ಹಕ್ಕುಗಳ ವೇದಿಕೆ ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ ಮಾನವ ಹಕ್ಕುಗಳ ದಿನಾಚರಣೆಯನ್ನು ಡಿ.10ರ ಮಂಗಳವಾರ ಬೆಳಿಗ್ಗೆ 10ಕ್ಕೆ ಆರ್.ಎಲ್.ಕಾನೂನು ಕಾಲೇಜಿನ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಕಾರ್ಯಕ್ರಮದ ಉದ್ಘಾಟನೆಯನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ನೆರವೇರಿಸುವರು.




ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ, ಹಿರಿಯ ಸಿವಿಲ್ ನ್ಯಾಯಾಧೀಶ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರೆಣ್ಣನವರ, ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಸುರೇಶ್.ಬಿ.ಇಟ್ನಾಳ್, ಜಿಲ್ಲಾ ರಕ್ಷಣಾಧಿಕಾರಿ ಉಮಾಪ್ರಶಾಂತ್, ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್.ಅರುಣ್‌ಕುಮಾರ್ ಆಗಮಿಸುವರು. ಇದೇ ವೇಳೆ ಹೊಸತು ಮಾಸಪತ್ರಿಕೆಯ ಸಂಪಾದಕ ಡಾ.ಸಿದ್ದನಗೌಡ ಪಾಟೀಲ್ ಉಪನ್ಯಾಸ ನೀಡುವರು. ಆರ್.ಎಲ್. ಕಾನೂನು ಕಾಲೇಜಿನ ಪ್ರಾಂಶುಪಾಲ ಡಾ.ಜಿ.ಎಸ್. ಯತೀಶ್ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಕಾರ್ಯಕ್ರಮದ ಸಂಯೋಜಕ, ಸಹಾಯಕ ಪ್ರಾಧ್ಯಾಪಕ ಕೆ.ಎನ್.ಪ್ರದೀಪ್ ತಿಳಿಸಿದ್ದಾರೆ.

### ಪರಿಶಿಷ್ಟ ಜಾತಿ ಮತ್ತು ಪಂಗಡದ ಕ್ರೀಡಾಪಟುಗಳಿಗೆ ಪ್ರೋತ್ಸಾಹಧನ: ಅರ್ಜಿ ಆಹ್ವಾನ

» ಚಿತ್ರದುರ್ಗ

ಯುವ ಸಬಲೀಕರಣ ಮತ್ತು ಕ್ರೀಡಾ ನಿರ್ದೇಶನಾಲಯದಿಂದ 2024-25ನೇ ಸಾಲಿನ ಪರಿಶಿಷ್ಟ ಜಾತಿ ಉಪಯೋಜನೆ ಹಾಗೂ ಪರಿಶಿಷ್ಟ ಪಂಗಡ ಉಪಯೋಜನೆ ಅಡಿಯಲ್ಲಿ 2023ನೇ ಕ್ಯಾಲೆಂಡರ್ ವರ್ಷದಲ್ಲಿ ಅಂತರರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯಮಟ್ಟದ ಅಧಿಕೃತ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದ ಪರಿಶಿಷ್ಟ ಜಾತಿ ಮತ್ತು ಪಂಗಡದ ಕ್ರೀಡಾಪಟುಗಳಿಗೆ ಪ್ರೋತ್ಸಾಹಧನ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಕ್ರೀಡಾಪಟುಗಳು ಅರ್ಜಿಗಳನ್ನು ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ ಕಚೇರಿಯಿಂದ ಇದೇ ಡಿ.19ರ ಒಳಗಾಗಿ ಪಡೆದು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಇದೇ ಡಿ.20ರೊಳಗಾಗಿ ಕಚೇರಿಗೆ ಸಲ್ಲಿಸಲು ತಿಳಿಸಿದೆ. ಕೊನೆಯ ದಿನಾಂಕದ ನಂತರ ಬರುವ ಅರ್ಜಿಗಳನ್ನು ಪ್ರೋತ್ಸಾಹಧನಕ್ಕೆ ಪರಿಗಣಿಸಲಾಗುವುದಿಲ್ಲ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

### ಇಂದು ಭೂಮಂತ್ರಯ್ಯನ ಕಥೆಗಳು ಕುರಿತು ಚಿಂತನ -ಮಂಥನ ಕಾರ್ಯಕ್ರಮ

» ಹೊಸದುರ್ಗ

ಹೆಜ್ಜೆ ಸಾಲು ಸಾಂಸ್ಕೃತಿಕ ವೇದಿಕೆ ಹೊಸದುರ್ಗ ವತಿಯಿಂದ ತಾಲೂಕಿನ ಶ್ರಿರಾಂಪುರ ಹೋಬಳಿಯ ಇಂದಿರಾ ಗಾಂಧಿ ವಸತಿಯುತ ಶಾಲೆಯಲ್ಲಿ ಡಿ.10 ರಂದು ಮಂಗಳವಾರ ಬೆಳಿಗ್ಗೆ 10.30 ಕ್ಕೆ ನಾಡಿನ ಪ್ರಖ್ಯಾತ ಕವಿ ಹಾಗೂ ಕೇಂದ್ರ ಸಾಹಿತ್ಯ ಅಕಾಡೆಮಿ ಪುರಸ್ಕೃತರಾದ ಬಿಳಿಗೆರೆ ಕೃಷ್ಣಮೂರ್ತಿ ಅವರ ಕೃತಿ ಭೂಮಂತ್ರಯ್ಯನ ಕಥೆಗಳು ಕುರಿತು ಚಿಂತನ – ಮಂಥನ ಕಾರ್ಯಕ್ರಮ ಜರುಗಲಿದೆ ಎಂದು ವೇದಿಕೆಯ ಅಧ್ಯಕ್ಷ ಸಾಹಿತಿ ಗೋ.ತಿಪ್ಪೇಶ್ ತಿಳಿಸಿದ್ದಾರೆ. ಚಿಕ್ಕನಾಯಕನಹಳ್ಳಿಯ ಚಿಂತಕರಾದ ಹೆಚ್.ಕಿರಣ್‌ಕುಮಾರ್ ಕಥೆಗಳ ಕುರಿತು ಮಾತನಾಡಲಿದ್ದು ಸ್ಥಳೀಯ ಸಾಹಿತಿಗಳಾದ ಪಿ.ಎಲ್.ಲೋಕೇಶ್ವರ್, ನಾಗತಿಹಳ್ಳಿಮಂಜುನಾಥ್, ನಿಸಾರ್‌ಅಹಮದ್, ಧನಂಜಯಮೆಂಗಸಂದ್ರ, ಕವಿಯತ್ರಿ ಕುಮಾರಿ ಎಂ.ಅರ್.ನಳಿನ, ಸುಹಾನ್‌ಇಸ್ಮಯಿಲ್, ಕೈನಡು ಚಂದ್ರಪ್ಪ, ಪ್ರಭಣ್ಣ ಹೊಸದುರ್ಗ, ಕಲಾವಿದ ಪೀಲಾಪುರ ಆರ್ ಕಂಠೇಶ್, ಇನ್ನು ಮುಂತಾದ ಕವಿ ,ಕಲಾವಿದರು ಭಾಗವಹಿಸಲಿದ್ದಾರೆ.

### ಹೊಸಮನೆ ರುದ್ರಪ್ಪ ನಿಧನ

» ಹೊಸದುರ್ಗ

ತಾಲೂಕಿನ ಮಧುರೆ ಗ್ರಾಮದ ಹೊಸಮನೆ ರುದ್ರಪ್ಪ



(85) ಸೋಮವಾರ ವಯೋ ಸಹಜದಿಂದ ನಿಧನರಾದರು. ಮೃತರಿಗೆ ತಾಲೂಕು ಸರಕಾರಿ ನೌಕರರ ಸಂಘದ ಮಾಜಿ ಅಧ್ಯಕ್ಷ ಎಂ.ಆರ್.ಶಾಂತಪ್ಪ ಸೇರಿ 5 ಮಂದಿ ಪುತ್ರರು, ಇಬ್ಬರು ಪುತ್ರಿಯರು ಇದ್ದಾರೆ. ಅಂತ್ಯಕ್ರಿಯೆ ಮಧುರೆ ಗ್ರಾಮದ ಮೃತರ ಜಮೀನಿನಲ್ಲಿ ಮಂಗಳವಾರ ಬೆಳಿಗ್ಗೆ 11.30 ಗಂಟೆಗೆ ನಡೆಯಲಿದೆ.

# ಬಯಲು ಮಲವಿಸರ್ಜನೆ ನಿಲ್ಲಿಸಿ, ಜಂತುಹುಳು ಬಾಧೆಯಿಂದ ನಿವಾರಣೆ ಪಡೆಯಿರಿ: ಟಿಎಚ್‌ಓ

» ಚಿತ್ರದುರ್ಗ

ಕರುಳಿನ ಹುಳುಗಳು ನಮ್ಮೊಳಗೆ ವಾಸಿಸುವ ಮೂಕ ಅಕ್ರಮಣಕಾರರು. ಬಯಲು ಮಲವಿಸರ್ಜನೆ ನಿಲ್ಲಿಸಿ, ಜಂತುಹುಳು ಬಾಧೆಯಿಂದ ನಿವಾರಣೆ ಪಡೆಯಿರಿ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ನಗರದ ಐಯುಡಿಪಿ ಬಡಾವಣೆಯ 11ನೇ ಕ್ರಾಸ್‌ನಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮತ್ತು ಮದಕರಿಪುರ ಭಾರತಿ ಪ್ರೌಢಶಾಲೆಯಲ್ಲಿ ಸೋಮವಾರ ರಾಷ್ಟ್ರೀಯ ಜಂತುಹುಳು ದಿನದ ಅಂಗವಾಗಿ ಜಂತು ನಿವಾರಕ ಮಾತ್ರೆ ನುಂಗಿಸುವ ಮೂಲಕ ಮತ್ತು ಶೌಚಾಲಯ ಬಳಕೆಯ ಮಹತ್ವ ಕುರಿತು ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ರಾಷ್ಟ್ರೀಯ ಜಂತುಹುಳು ನಿವಾರಣಾ ದಿನವನ್ನು 2015ರಲ್ಲಿ ಪ್ರಾರಂಭಿಸಲಾಯಿತು. ಪ್ರತಿ ವರ್ಷ ಎರಡು ಎನ್‌ಡಿಡಿ ಸುತ್ತುಗಳ ಮೂಲಕ ಕೋಟಿಗಟ್ಟಲೆ ಮಕ್ಕಳು ಮತ್ತು ಹದಿಹರೆಯದವರನ್ನು ತಲುಪುವ ಮೂಲಕ ಒಂದೇ ದಿನದಲ್ಲಿ ಜಾರಿಗೊಳಿಸಲಾದ ಅತಿದೊಡ್ಡ ಸಾರ್ವಜನಿಕ ಕಾರ್ಯಕ್ರಮಗಳಲ್ಲಿ



ಒಂದಾಗಿದೆ. ದೇಶದ ಪ್ರತಿಯೊಂದು ಮಗುವನ್ನು ಹುಳು ಮುಕ್ತರನ್ನಾಗಿಸುತ್ತದೆ. “ಅವರ ಒಟ್ಟಾರೆ ಆರೋಗ್ಯ, ಪೌಷ್ಠಿಕಾಂಶದ ಸ್ಥಿತಿ, ಶಿಕ್ಷಣದ ಪ್ರವೇಶ ಮತ್ತು ಜೀವನದ ಗುಣಮಟ್ಟ ಸುಧಾರಿಸಲು” ಶಾಲೆಗಳು ಮತ್ತು ಅಂಗನವಾಡಿ ಕೇಂದ್ರಗಳ ವೇದಿಕೆಗಳ ಮೂಲಕ ಜಂತುಹುಳು ನಿವಾರಣೆ ಮಾಡಲಾಗುತ್ತದೆ ಎಂದು ಹೇಳಿದರು.

ಕಾಸವರಹಟ್ಟಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಕಾವ್ಯ ಮಾತನಾಡಿ, ವೈಯಕ್ತಿಕ ನೈರ್ಮಲ್ಯದ ಕೊರತೆ, ಬೇಯಿಸದ ಮತ್ತು ಕಲುಷಿತ ಆಹಾರ ಮತ್ತು ಅತಿಯಾದ ಸಿಹಿ ತಿಂಡಿಗಳು ಮತ್ತು ಜಂಕ್ ಫುಡ್ ಸೇವನೆ ಸೇರಿದಂತೆ ಮಕ್ಕಳಲ್ಲಿ ವಿವಿಧ ಅಂಶಗಳಿಂದ ಜಂತುಹುಳು ಬಾಧೆ ಉಂಟಾಗಬಹುದು ಎಂದರು.

ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜನಾಥ ಮಾತನಾಡಿ, ನೈರ್ಮಲ್ಯ ಶೌಚಾಲಯಗಳನ್ನು ಬಳಸಿ. ಹೊರಗೆ ಮಲವಿಸರ್ಜನೆ ಮಾಡಬೇಡಿ. ಮುಖ್ಯವಾಗಿ ತಿನ್ನುವ ಮೊದಲು ಮತ್ತು ಶೌಚಾಲಯಗಳನ್ನು ಬಳಸಿದ ನಂತರ ಕೈಗಳನ್ನು ಸರಿಯಾಗಿ ತೊಳೆಯಿರಿ. ಚಪ್ಪಲಿ ಮತ್ತು ಬೂಟುಗಳನ್ನು ಧರಿಸಿ. ಸುರಕ್ಷಿತ ಮತ್ತು ಶುದ್ಧ ನೀರಿನಲ್ಲಿ ಹಣ್ಣುಗಳು ಮತ್ತು ತರಕಾರಿಗಳನ್ನು ಸರಿಯಾಗಿ ತೊಳೆಯಿರಿ. ಸರಿಯಾಗಿ ಬೇಯಿಸಿದ ಆಹಾರ ಸೇವಿಸಿ ಎಂದು ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ 19 ವರ್ಷದ ಒಳಗಿನ 325 ಮಕ್ಕಳಿಗೆ ಸಾಂಕೇತಿಕವಾಗಿ ಜಂತುಹುಳ ನಿವಾರಕ ಮಾತ್ರೆ ನುಂಗಿಸಲಾಯಿತು.

ಕಾರ್ಯಕ್ರಮದಲ್ಲಿ ವೈದ್ಯಾಧಿಕಾರಿಗಳಾದ ಡಾ. ಸುರೇಂದ್ರ, ಡಾ. ಕಾವ್ಯ, ಆರೋಗ್ಯ ಶಿಕ್ಷಣಾಧಿಕಾರಿ ಬಿ.ಜಾನಕಿ, ಆರೋಗ್ಯ ಸುರಕ್ಷತಾ ಅಧಿಕಾರಿಗಳಾದ ಕಾತ್ಯಾಯನಮ್ಮ, ಉಷಾ, ಪವಿತ್ರ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಶ್ರೀನಿವಾಸ್, ಪ್ರವೀಣ್ ಕುಮಾರ್, ಶಾಲಾ ಶಿಕ್ಷಕರಾದ ಉಮೇಶ್, ದ್ಯಾಮಣ್ಣ, ಆಶಾ ಕಾರ್ಯಕರ್ತೆಯರು, ಮಕ್ಕಳು, ಪೋಷಕರು ಇದ್ದರು.

## ಸಹ ಶಿಕ್ಷಕರ ಸಂಘದಿಂದ ಬೇಡಿಕೆ ಈಡೇರಿಕೆಗೆ ಮನವಿ

» ಚಳ್ಳಕೆರೆ

ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘ ಚಳ್ಳಕೆರೆ ತಾಲ್ಲೂಕು ಘಟಕ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮನವಿ ನೀಡಿ, ಪ್ರೌಢಶಾಲಾ ಸಹ ಶಿಕ್ಷಕರು ಪ್ರತಿನಿತ್ಯ ಎದುರಿಸುತ್ತಿರುವ ಹಲವಾರು ಸಮಸ್ಯೆಗಳಿಗೆ ಪರಿಹಾರ ಹಾಗೂ ಕೆಲಸದ ಒತ್ತಡವನ್ನು ಕಡಿತಗೊಳಿಸುವಂತೆ ಮನವಿ ಮಾಡಿದರು.




ತಾಲ್ಲೂಕು ಘಟಕದ ಅಧ್ಯಕ್ಷ ಬಿ.ರಾಜಕುಮಾರ್ ನೇತೃತ್ವದಲ್ಲಿ ಸುಮಾರು ನೂರಕ್ಕೂ ಹೆಚ್ಚು ಪ್ರೌಢಶಾಲಾ ಶಿಕ್ಷಕರು ಶುಕ್ರವಾರ ಸಂಜೆ ಶಿಕ್ಷಣ ಇಲಾಖೆ ಕಚೇರಿಗೆ ಆಗಮಿಸಿ 9 ಬೇಡಿಕೆಗಳನ್ನು ಈಡೇರಿಸುವಂತೆ ಮನವಿ ನೀಡಿದರು. ಸಂಘದ ಕಾರ್ಯದರ್ಶಿ ಡಿ.ವೀರಣ್ಣ ಮಾತನಾಡಿ, ಬಡ್ತಿಯೂ ಸೇರಿದಂತೆ ಹಲವಾರು ಸಮಸ್ಯೆಗಳನ್ನು ಪ್ರತಿನಿತ್ಯ ಸಹ ಶಿಕ್ಷಕರು ಅನುಭವಿಸುತ್ತಾ ಬಂದಿದ್ದಾರೆ. ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ನೀಡುವುದು ಒಂದುಕಡೆಯಾದರೆ, ಫೇಲಾದ ಮಕ್ಕಳಿಗೆ ವಿಶೇಷ ತರಬೇತಿ ಮೂಲಕ ಅವರನ್ನು ಸಿದ್ದಪಡಿಸಬೇಕಿದೆ. ಸರ್ಕಾರದ ಮತಗಟ್ಟೆ ಸೇರಿದಂತೆ ಹಲವಾರು ಕೆಲಸ ಕಾರ್ಯದಲ್ಲಿ ಶಿಕ್ಷಕರು ಭಾಗವಹಿಸಬೇಕಿದೆ. ಈ ಹಿಂದೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಎರಡು ಹಂತ ಪರೀಕ್ಷೆ ಇತ್ತು, ಈಗ ಇದನ್ನು ಮೂರಕ್ಕೆ ಏರಿಸಿರುವುದನ್ನು ಕೂಡಲೇ ರದ್ದುಪಡಿಸಬೇಕು. ಸಹ ಶಿಕ್ಷಕರ ಸಂಘ ಬೇಡಿಕೆಗಳ ಈಡೇರಿಕೆಗೆ ಸರ್ಕಾರ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದರು.

ಮಾಜಿ ಅಧ್ಯಕ್ಷ ಎಚ್.ತಿಪ್ಪೇಸ್ವಾಮಿ ಮಾತನಾಡಿ, ಸಹ ಶಿಕ್ಷಕರ ಸಂಘ ಕಳೆದ ಹಲವಾರು ದಶಕಗಳಿಂದಶೈಕ್ಷಣಿಕ ಅಭಿವೃದ್ಧಿಗೆ ತನ್ನದೇಯಾದ ವಿಶೇಷ ಕೊಡುಗೆ ನೀಡುತ್ತಾ ಬಂದಿದೆ. ಯಾವುದೇ ಹಂತದಲ್ಲೂ ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಎಚ್ಚರಿಕೆ ವಹಿಸಿದೆ. ಮಕ್ಕಳ ಶೈಕ್ಷಣಿಕ ವಿಚಾರದಲ್ಲಿ ಎಲ್ಲಾ ಪ್ರಾಮಾಣಿಕ ಪ್ರಯತ್ನ ಮಾಡಲಾಗುತ್ತಿದೆ. ಪ್ರತಿನಿತ್ಯ ಬೆಳಗ್ಗೆಯಿಂದ ಸಂಜೆತನಕ ಕಾರ್ಯನಿರ್ವಹಿಸುವ ಶಿಕ್ಷಕರಿಗೆ ಸರ್ಕಾರ ಹಲವಾರು ಸವಲತ್ತು ನೀಡದೆ ವಿಳಂಬ ನೀತಿ ಅನುಸರಿಸುತ್ತಿರುವುದು ಬೇಸರ ತಂದಿದೆ ಎಂದರು.

ಮನವಿ ಸ್ವೀಕರಿಸಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ಪ್ರೌಢಶಾಲಾ ಸಹ ಶಿಕ್ಷಕರ ಸಂಘ ನೀಡಿದ ಮನವಿಯನ್ನುಸ್ವೀಕರಿಸಿದ್ದು, ಇದನ್ನು ಡಿಡಿಪಿಐ ಮೂಲಕ ಸರ್ಕಾರಕ್ಕೆ ಕಳಿಸುವ ಭರವಸೆ ನೀಡಿದರು. ತಾಲ್ಲೂಕಿನಾದ್ಯಂತ ಪ್ರೌಢಶಾಲಾ ಸಹ ಶಿಕ್ಷಕರ ಸಂಘ ಹೆಚ್ಚು ಸಂಘಟನಾತ್ಮಕವಾಗಿ ಕಾರ್ಯನಿರ್ವಹಿಸುತ್ತಿದೆ. ವಿಶೇಷವಾಗಿ ವಿದ್ಯಾರ್ಥಿಗಳ ಕಲಿಕೆಯಲ್ಲಿ ಆಸಕ್ತಿ ವಹಿಸಿದೆ. ತಮ್ಮ ಎಲ್ಲಾ ಬೇಡಿಕೆಗಳು ಈಡೇರಿಸುವಲ್ಲಿ ಸರ್ಕಾರ ಕಾರ್ಯೋನ್ಮುಖವಾಗಬೇಕಿದೆ. ಎಂದರು. ಪ್ರೌಢಶಾಲಾ ಮುಖ್ಯೋಪಾಧ್ಯಾಯ ಸಂಘದ ಅಧ್ಯಕ್ಷಡಿ.ಶ್ರೀನಿವಾಸ್, ಕಾರ್ಯದರ್ಶಿ ಡಿ.ಎಸ್.ಪಾಲಯ್ಯ, ತಾಲ್ಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಟಿ.ವೀರೇಶ್, ಜಿಲ್ಲಾ ಖಜಾಂಚಿ ಎಲ್.ರುದ್ರಮುನಿ, ರಾಜ್ಯಪರಿಷತ್ ಸದಸ್ಯ ಡಿ.ನಾಗರಾಜ, ಉಪಾಧ್ಯಕ್ಷ ಗೋವಿಂದರೆಡ್ಡಿ, ಸಹಕಾರ್ಯದರ್ಶಿ ಎಚ್.ಕೆ.ಯಶೋಧ, ಸುರೇಶ್, ವಿಜಯಕುಮಾರ್, ಮಹಂತೇಶ್, ದಾದಾಫೀರ್, ಈರಣ್ಣ, ಬಿ.ಎಲ್. ಉಮಾ, ಪೂರ್ಣಿಮಾ, ಕುಸುಮಾ, ಸುಜಾತ, ರೇಹಾನ, ಎಂ.ಪಿ.ಪ್ರದೀಪ್ ಮುಂತಾದವರು ಉಪಸ್ಥಿತರಿದ್ದರು.

## ಹಿರಿಯೂರು ಟಿ.ಬಿ.ವೃತ್ತದಲ್ಲಿ ಒನ್‌ವೇ ಮಾಡುವಂತೆ ಎಸ್‌ಪಿಗೆ ಮನವಿ



» ಚಿತ್ರದುರ್ಗ

ಹಿರಿಯೂರು ನಗರದ ಟಿ.ಬಿ.ವೃತ್ತದ ಸಮೀಪವಿರುವ ಅಂಡರ್‌ಪಾಸ್ ಬಳಿ ಓರ್ವ ಪೊಲೀಸ್ ಪೇದೆಯನ್ನು ನೇಮಿಸಿ ಚರ್ಚ್ ಮತ್ತು ಸಂಜೀವಿನಿ ಆಸ್ಪತ್ರೆ ರಸ್ತೆಗಳನ್ನು ಒನ್‌ವೇ ಮಾಡುವಂತೆ ಒತ್ತಾಯಿಸಿ ಅಂಬೇಡ್ಕರ್ ಸ್ವಾಭಿಮಾನಿ ಸೇನೆಯಿಂದ ಜಿಲ್ಲಾ ರಕ್ಷಣಾಧಿಕಾರಿಗೆ ಸೋಮವಾರ ಮನವಿ ಸಲ್ಲಿಸಲಾಯಿತು.ಟಿ.ಬಿ.ವೃತ್ತದ ಬಳಿಯಿರುವ ಅಂಡರ್‌ಪಾಸ್‌ನಲ್ಲಿ ನಾಲ್ಕು ದಿಕ್ಕುಗಳಿಂದ ವಾಹನಗಳು ಸಂಚರಿಸುವುದರಿಂದ ಬೆಳಿಗ್ಗೆ 8 ರಿಂದ ಹತ್ತು ಗಂಟೆವರೆಗೆ ಶಾಲಾ ಸಮಯದಲ್ಲಿ ಟ್ರಾಫಿಕ್ ಜಾಮ್ ಆಗುತ್ತದೆ. ಚರ್ಚ್ ರಸ್ತೆಯಲ್ಲಿ ಶಾಲೆಯಿರುವುದರಿಂದ ಮಕ್ಕಳು ಜೀವ ಭಯದಲ್ಲಿ ರಸ್ತೆ ದಾಟುವಂತಾಗಿದೆ. ಹಾಗಾಗಿ ಇಲ್ಲಿ ಪೊಲೀಸ್ ಪೇದೆಯೊಬ್ಬರನ್ನು ನೇಮಿಸುವಂತೆ ಪೊಲೀಸ್ ವರಿಷ್ಠಾಧಿಕಾರಿಯವರಲ್ಲಿ ವಿನಂತಿಸಿದರು. ಅಂಬೇಡ್ಕರ್ ಸ್ವಾಭಿಮಾನಿ ಸೇನೆ ಜಿಲ್ಲಾಧ್ಯಕ್ಷ ಕೆ.ರಾಮಚಂದ್ರ, ಕಾರ್ಯಾಧ್ಯಕ್ಷ ತಿಪ್ಪೇಸ್ವಾಮಿ, ಗೌರವಾಧ್ಯಕ್ಷ ಮೊಹಮದ್ ಮೊಹಸೀನ್, ಹಿರಿಯೂರು ತಾಲ್ಲೂಕು ಅಧ್ಯಕ್ಷಆರ್.ರಾಘವೇಂದ್ರ, ಗೌರವಾಧ್ಯಕ್ಷ ಗೋವಿಂದಪ್ಪ, ತಾಲ್ಲೂಕು ಉಪಾಧ್ಯಕ್ಷ ಓಂಕಾರಪ್ಪ, ಲಕ್ಷ್ಮಣ್‌ರಾವ್ ಸಂದರ್ಭದಲ್ಲಿ ಹಾಜರಿದ್ದರು.

## ವಿದ್ಯುತ್ ಗುತ್ತಿಗೆದಾರ ಸಮಿತಿಯಿಂದ ಮೈಲಾರಸ್ವಾಮಿಗೆ ಸನ್ಮಾನ



» ಚಿತ್ರದುರ್ಗ

ಮಯೂರ್ ಇಂಟರ್‌ನ್ಯಾಷನಲ್ ಸ್ಕೂಲ್ ಮಾಲೀಕರು ಹಾಗೂ ಆದಿಶಕ್ತಿ ಎಲೆಕ್ಟ್ರಿಕಲ್ಸ್‌ನ ಮೈಲಾರಸ್ವಾಮಿ ಇವರ ಸಮಾಜ ಸೇವೆಯನ್ನು ಗುರುತಿಸಿ ಭಾರತ ಸರ್ಕಾರದ ಮಾನ್ಯತೆಯುಳ್ಳ ಎಮರ್ಜಿಂಗ್ ಅಚೀವರ್ಸ್ ಅವಾರ್ಡ್ ಕೌನ್ಸಿಲ್ ವತಿಯಿಂದ ದೆಹಲಿಯಲ್ಲಿ ಡಾಕ್ಟರೇಟ್ ಅವಾರ್ಡ್ ನೀಡಿ ಗೌರವಿಸಲಾಯಿತು.

## 14 ರಂದು ಐ.ಡಿ. ಪೀಠಕ್ಕೆ ನಿಗಧಿತ ಸಮಯದಲ್ಲಿ ವಾಹನ ಸಂಚಾರ

**ಚಿಕ್ಕಮಗಳೂರು:** ಚಿಕ್ಕಮಗಳೂರು ನಗರ ಮತ್ತು ಶ್ರೀ ಗುರುದತ್ತಾತ್ರೇಯ ಬಾಬಾಬುಡನ್ ಸ್ವಾಮಿ ದರ್ಗಾದಲ್ಲಿ ಡಿಸೆಂಬರ್ 12 ರಿಂದ 14 ರವರೆಗೆ ದತ್ತಜಯಂತಿ ಕಾರ್ಯಕ್ರಮ ನಡೆಯಲಿರುವ ಹಿನ್ನಲೆಯಲ್ಲಿ ಜಿಲ್ಲೆಯ ಹಾಗೂ ಹೊರ ಜಿಲ್ಲೆಗಳಿಂದ ಸುಮಾರು 25000 ರಿಂದ 30000 ದತ್ತಮಾಲಾಧಾರಿಗಳು/ಭಕ್ತಾದಿಗಳು/ಸಾರ್ವಜನಿಕರು ವಾಹನಗಳ ಮೂಲಕ ಆಗಮಿಸುವುದರಿಂದ , ಈ ಮಾರ್ಗದಲ್ಲಿ ರಸ್ತೆಯು ಹೆಚ್ಚಿನ ತಿರುವುಗಳಿಂದ ಕೂಡಿದ್ದು, ವಾಹನಗಳ ದಟ್ಟಣೆ ಉಂಟಾಗಿ ವಾಹನಗಳ ಹಾಗೂ ಭಕ್ತಾದಿಗಳ ಸುಗಮ ಸಂಚಾರಕ್ಕೆ ಅಡಚಣೆ ಉಂಟಾಗುವ ಸಾಧ್ಯತೆಗಳು ಹೆಚ್ಚಾಗಿರುತ್ತದೆ. ಆದ್ದರಿಂದ ಶ್ರೀ ಗುರುದತ್ತಾತ್ರೇಯ ಬಾಬಾಬುಡನ್ ಸ್ವಾಮಿ ದರ್ಗಾಕ್ಕೆ ತೆರಳುವ ಮುಖ್ಯ ಮಾರ್ಗದಲ್ಲಿರುವ ಕೈಮರ ಚೆಕ್ ಪೋಸ್ಟ್‌ನಲ್ಲಿ ಡಿಸೆಂಬರ್ 14 ರಂದು ಮಧ್ಯಾಹ್ನ 2.00 ಗಂಟೆಯವರೆಗೆ ಮಾತ್ರ ವಾಹನಗಳು ಸಂಚರಿಸಲು ಅವಕಾಶವನ್ನು ಕಲ್ಪಿಸಲಾಗಿರುತ್ತದೆ. ನಂತರದಲ್ಲಿ ಆಗಮಿಸುವ ವಾಹನಗಳಿಗೆ ತೆರಳಲು ಅವಕಾಶವಿರುವುದಿಲ್ಲ ಎಂದು ಜಿಲ್ಲಾಧಿಕಾರಿಗಳ ಕಛೇರಿ ಪ್ರಕಟಣೆಯಲ್ಲಿ ತಿಳಿಸಿದೆ.

**ಪ್ರಮುಖ ಸುದ್ದಿ**

# ವಚನಗಳು ಬದುಕಿಗನ ಆದರ್ಶ ಮೌಲ್ಯಗಳು: ಸ್ವಾಮೀಜಿ

» ಹೊಳಲ್ಕೆರೆ

ವಚನ ಸಂದೇಶ ಮತ್ತು ಹಸಿರು ಜಾಗೃತಿ ಕುರಿತು ಸಾಮಾಜಿಕ ಜಾಗೃತಿ ಆಂದೋಲನ ಕೈಗೊಳ್ಳಲು ಜನವರಿ 20 ರಂದು ಹೊಳಲ್ಕೆರೆ ಒಂಟಿ ಕಂಬದ ಮುರುಘ ಮಠ ದಿಂದ ಉಳವಿ ಚನ್ನಬಸವೇಶ್ವರ ಸ್ವಾಮಿ ಗದ್ದೆಗೆಯ ತನಕ ಪಾದಯಾತ್ರೆ ಕೈಗೊಳ್ಳಲಾಗುತ್ತದೆ ಎಂದು ಒಂಟಿ ಕಂಬದ ಮುರುಘ ಮಠದ ಶ್ರೀ ತಿಪ್ಪೇರುದ್ರ ಸ್ವಾಮೀಜಿ ತಿಳಿಸಿದ್ದಾರೆ.

ಅವರು ಹೊಳಲ್ಕೆರೆ ಪಟ್ಟಣದ ಒಂಟಿ ಕಂಬದ ಮಠದಲ್ಲಿ ಸೋಮವಾರ ಪಾದಯಾತ್ರೆ ಕುರಿತು ಪೂರ್ವಭಾವಿ ಸಿದ್ಧತಾ ಸಭೆಯ ಸಾನಿಧ್ಯ ವಹಿಸಿ ಮಾತನಾಡಿದರು.

ಚಿತ್ರದುರ್ಗ ಮುರುಘ ಮಠದ ಶ್ರೀ ಬಸವಕುಮಾರ ಮಾಹಾಸ್ವಾಮಿಗಳ ಮಾರ್ಗದರ್ಶನಲ್ಲಿ ಪಾದಯಾತ್ರೆಗೆ ಬರದ ಸಿದ್ದತೆ ನಡೆಸಿದೆ. ಜತೆಗೆ ಪಾದಯಾತ್ರೆ ಹಾದು ಹೋಗುವ ಎಲ್ಲಾ ಜಿಲ್ಲೆಯಲ್ಲಿರುವ ಮಠಾಧೀಶರು, ಸಂಘ ಸಂಸ್ಥೆಗಳ, ಮಹಿಳಾ ಸಂಘಗಳ, ರಾಜಕಾರಣಿಗಳ ಬೆಂಬಲ ಪಡೆದು ಜನರಲ್ಲಿ ಜಾಗೃತಿ



ಮೂಡಿಸಲಾಗುತ್ತದೆ ಎಂದರು.

12ನೇ ಶತಮಾನದಿಂದಲೂ ಬಸವಾದಿ ಶರಣರ ವಚನಗಳ ಮಹತ್ವವನ್ನು ಸಮಾಜಕ್ಕೆ ಬಿತ್ತರಿಸುತ್ತಿದ್ದಾರೆ. ಇತ್ತೀಚಿನ ದಿನಗಳಲ್ಲಿ ಆಧುನಿಕರಣ ಹೆಚ್ಚಾಗಿ ವಚನ ಸಾಹಿತ್ಯ ಕಡೆಗಣಿಸುತ್ತಿರುವುದು ವಿಷಾದನೀಯ ಸಂಗತಿ. ಹಾಗಾಗಿ ವಚನ ಸಂದೇಶ, ಸಾಹಿತ್ಯದ ಮಹತ್ವ ಮತ್ತು ತತ್ವಗಳನ್ನು ಪಸರಿಸುವಂತೆ ಮಾಡಲು ಹೊಳಲ್ಕೆರೆ ಯಿಂದ ಉಳವಿ ಚನ್ನಬಸವಣ್ಣನವರ ಮಹಾಮನೆವರೆಗೆ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ. ಪಾದಯಾತ್ರೆಯನ್ನು ಜನವರಿ 20ರಂದು ಹೊಳಲ್ಕೆರೆ ಯಿಂದ ಆರಂಭಿಸಿ ಚಿಕ್ಕಜಾಜೂರು, ಮಾಯಕೊಂಡ, ದಾವಣಗೆರೆ, ಹರಿಹರ, ರಾಣೇಬೆನ್ನೂರು, ಹಾವೇರಿ, ಧಾರವಾಡ, ದಾಂಡೇಲಿ, ಯಲ್ಲಾಪುರ ಮಾರ್ಗವಾಗಿ ಉಳಿವಿಯನ್ನು ತಲುಪಲು ಸುಮಾರು 300 ಕಿಲೋಮೀಟರ್‌ಗಳ 15 ದಿನಗಳ ಪಾದಯಾತ್ರೆಯನ್ನ ಕೈಗೊಳ್ಳಲಾಗುತ್ತದೆ. ಜೊತೆಗೆ ಬಸವ ಸತ್ವ ಸಂದೇಶಗಳನ್ನು ಕುರಿತು ದಾರಿಯಲ್ಲಿ ಬರುವ ಗ್ರಾಮಗಳಲ್ಲಿ ಅರಿವು ಜಾತ ಕಾರ್ಯಕ್ರಮಗಳು, ವಚನ ಸಂದೇಶದ ಉಪನ್ಯಾಸಗಳು ಸೇರಿ ವಿಭಿನ್ನ ರೀತಿಯ ಕಾರ್ಯಕ್ರಮಗಳನ್ನ ಆಯೋಜಿಸಲಾಗುತ್ತದೆ. ಈ ನಿಟ್ಟಿನಲ್ಲಿ ಎಲ್ಲರ ಸಹಕಾರ ಮತ್ತು ಪೂತ್ಸಾಹದ ಜತೆ ಪಾದಯಾತ್ರೆಯಲ್ಲಿ ಸಾವಿರಾರು ಭಕ್ತರು ಪಾಲ್ಗೊಳ್ಳಬೇಕೆಂದು ಮನವಿ ಮಾಡಿದರು.

ಸಭೆಯಲ್ಲಿ ಶ್ರೀ ಪೂರ್ಣಾನಂದ ಸ್ವಾಮಿ, ರೈತ ಸಂಘದ ಅಧ್ಯಕ್ಷ ರಂಗಸ್ವಾಮಿ, ವಕೀಲರಾದ ಎಸ್.ವೇದಮೂರ್ತಿ, ಲೋಕೇಶ್, ಡಿ.ಎಸ್.ಮಲ್ಲಿಕಾರ್ಜುನ್, ರೆಡ್ ಕ್ರಾಸ್ ಗಿರೀಶ್, ನಿವೃತ್ತ ತಹಸೀಲ್ದಾರ್ ಗಂಗಮ್ಮವೀರಭದ್ರಯ್ಯ, ಗ್ರಾ.ಪಂ.ಮಾಜಿ ಅಧ್ಯಕ್ಷ ತಿಪ್ಪೇಸ್ವಾಮಿ, ರೈತ ಸಂಘದ ಕಾರ್ಯದರ್ಶಿ ಅಜ್ಜಯ್ಯ್, ಶಿವಮೂರ್ತಿ, ಮುಖ್ಯಶಿಕ್ಷಕಿ ಗೀತಮ್ಮ, ಭಾಗ್ಯಮ್ಮ, ಕೆ.ಎನ್.ಬಸವರಾಜು ಇದ್ದರು.

## ಫಾಸ್ಟ್ ನ್ಯೂಸ್

### ಸಾಣೇಹಳ್ಳಿ ಕಂಗುವಳ್ಳಿ ಪಂಚಾಯಿತಿ ವ್ಯಾಪ್ತಿಯಲ್ಲಿ ಇಂದು ವಿದ್ಯುತ್ ವ್ಯತ್ಯಯ

» **ಹೊಸದುರ್ಗ**

ತಾಲೂಕಿನ ನೀರಗುಂದ 66/11 ಕೆ.ವಿ.ವಿದ್ಯುತ್ ಕೇಂದ್ರದಲ್ಲಿ ನಿರ್ವಹಣಾ ಕಾಮಗಾರಿ ನಿರ್ವಹಿಸುವುದರಿಂದ ಡಿ,10 ರಂದು ಇಂದು (ಮಂಗಳವಾರ) ಬೆಳಿಗ್ಗೆ 10 ರಿಂದ ಸಂಜೆ 6 ವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು ತಾಲೂಕಿನ ಸಾಣೇಹಳ್ಳಿಪಂಚಾಯಿತಿ,ಕಂಗುವಳ್ಳಿ ಪಂಚಾಯಿತಿಯ ಎಲ್ಲಾ ಗ್ರಾಮಗಳು ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಐಪಿ ಸೆಟ್ ಮತ್ತು ಲೈಟಿಂಗ್ ಸ್ಥಾವರಗಳ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಬೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮಾನವ ಹಕ್ಕುಗಳ ದಿನಾಚರಣೆ: ಕಡ್ಡಾಯ ಆಚರಣೆಗೆ ಆದೇಶ

» **ದಾವಣಗೆರೆ**

ಜಿಲ್ಲೆಯ ಎಲ್ಲ ಜಿಲ್ಲಾ ಮತ್ತು ತಾಲೂಕು ಕೇಂದ್ರದ ಕಚೇರಿಗಳಲ್ಲಿ ಕಡ್ಡಾಯವಾಗಿ ಡಿಸೆಂಬರ್ 10 ರಂದು ಮಾನವ ಹಕ್ಕುಗಳ ದಿನಾಚರಣೆ ಕಾರ್ಯಕ್ರಮ ಆಚರಿಸಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರ ಸ್ವಾಮಿ ಅವರು ತಿಳಿಸಿದ್ದಾರೆ. ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗವು ಪ್ರತಿ ಜಿಲ್ಲೆಯಲ್ಲಿ ಮತ್ತು ಜಿಲ್ಲೆಯ ತಾಲೂಕು ಕೇಂದ್ರಗಳಲ್ಲಿ ಮಾನವ ಹಕ್ಕುಗಳ ದಿನಾಚರಣೆಯನ್ನು ಪ್ರತೀ ವರ್ಷದಂತೆ ಈ ವರ್ಷವೂ ಸಹ ವಿಶೇಷವಾಗಿ ಮಾನವ ಹಕ್ಕುಗಳ ದಿನಾಚರಣೆ ಆಚರಿಸಲು ನಿರ್ಧಾರ ಕೈಗೊಂಡಿದ್ದು, ಆಯೋಗದ ನಿರ್ದೇಶನದಂತೆ, ಡಿಸೆಂಬರ್ 10 ರಂದು ಎಲ್ಲಾ ಇಲಾಖೆಗಳ ಕಚೇರಿಗಳಲ್ಲಿ ಮಾನವ ಹಕ್ಕುಗಳ ದಿನಾಚರಣೆ ಆಚರಿಸಬೇಕು. ದಾವಣಗೆರೆ ನಗರದಲ್ಲಿ ಡಿ.10 ರ ಬೆಳಿಗ್ಗೆ 10 ಗಂಟೆಗೆ ಆರ್.ಎಲ್.ಕಾನೂನು ಕಾಲೇಜಿನಲ್ಲಿ ಮಾನವ ಹಕ್ಕುಗಳ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಅವರು ತಿಳಿಸಿದ್ದಾರೆ.

### ಟಿವಿ ರಿಪೇರಿ ಉಚಿತ ತರಬೇತಿಗೆ ಅರ್ಜಿ ಆಹ್ವಾನ

» **ದಾವಣಗೆರೆ**

ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ಹಾಗೂ ರುಡ್‌ಸೆಟ್ ಸಂಸ್ಥೆಯಿಂದ ಟಿವಿ ರಿಪೇರಿ ಕುರಿತು 30 ದಿನಗಳ ಉಚಿತ ತರಬೇತಿಗೆ ಆಸಕ್ತ ಗ್ರಾಮೀಣ ನಿರುದ್ಯೋಗಿ ಯುವಕ ಯುವತಿಯರಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದು, ಬರಹ ಬಲ್ಲವರಾಗಿರಬೇಕು. ಬಿಪಿಎಲ್ ಕಾರ್ಡ್ ಅಥವಾ ಜಾಬ್ ಕಾರ್ಡ್ ಹಾಗೂ ಆಧಾರ್ ಕಾರ್ಡ್ ಕಡ್ಡಾಯವಾಗಿ ಹೊಂದಿರುವ ಗ್ರಾಮೀಣ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ತರಬೇತಿ ವಸತಿಯುತವಾಗಿದ್ದು, ಉಚಿತವಾಗಿ ಊಟ, ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಅಥವಾ ದೂ.ಸಂ. 9740982585, 9380162042, 9241482541 ಗೆ ಸಂಪರ್ಕಿಸಲು ರುಡ್‌ಸೆಟ್ ಸಂಸ್ಥೆ ಶಾಖೆಯ ನಿರ್ದೇಶಕರಾದ ರವಿಕುಮಾರ ತಿಳಿಸಿದ್ದಾರೆ.

### ರಾಜ್ಯೋತ್ಸವ ಆಚರಣೆ




» **ಚಿತ್ರದುರ್ಗ**

ಕನ್ನಡ ರಾಜ್ಯೋತ್ಸವ ಕೇವಲ ನವೆಂಬರ್ ತಿಂಗಳಿಗಷ್ಟೆ ಸೀಮಿತವಾಗಿರಬಾರದು, ಪ್ರತಿಯೊಬ್ಬರ ದಿನನಿತ್ಯದ ಬದುಕಿನಲ್ಲಿ ಕನ್ನಡ ಬಳಕೆಯಾದಾಗ ಮಾತ್ರ ಕನ್ನಡ ರಾಜ್ಯೋತ್ಸವಕ್ಕೆ ನಿಜವಾದ ಗೌರವ ನೀಡಿದಂತಾಗುತ್ತದೆ ಎಂದು ನವ ಕ್ರಾಂತಿ ರಕ್ಷಣಾ ವೇದಿಕೆ ಸಂಸ್ಥಾಪಕ ರಾಜ್ಯಾಧ್ಯಕ್ಷ ಪ್ರದೀಪ್‌ಕುಮಾರ್ ತಿಳಿಸಿದರು. ನವ ಕ್ರಾಂತಿ ರಕ್ಷಣಾ ವೇದಿಕೆ ಕಚೇರಿಯಲ್ಲಿ ಕನ್ನಡಾಂಭೆ ಹಾಗೂ ಸಂವಿದಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡುತ್ತ ಕನ್ನಡ ನಾಡು, ನುಡಿ, ನೆಲ, ಜಲದ ಬಗ್ಗೆ ಎಲ್ಲರೂ ಅಭಿಮಾನ ಮೂಡಿಸಿಕೊಳ್ಳಬೇಕು. ಅದೇ ರೀತಿ ಸಂವಿಧಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್‌ರವರ ಆಶಯದಂತೆ ಪ್ರತಿಯೊಬ್ಬರು ಶಿಕ್ಷಣವಂತರಾಗಬೇಕೆಂದು ಹೇಳಿದರು. ನವ ಕ್ರಾಂತಿ ರಕ್ಷಣಾ ವೇದಿಕೆ ಗೌರವಾಧ್ಯಕ್ಷ ಮಹಾಂತೇಶ್, ಜಿಲ್ಲಾಧ್ಯಕ್ಷ ಮೋಹನ್, ಪ್ರಧಾನ ಕಾರ್ಯದರ್ಶಿ ವಿರೂಪಾಕ್ಷ, ಹನುಮಂತರಾಯ, ಬಾಗೋಡಿ ಸ್ವಾಮಿ ನಗರಾಧ್ಯಕ್ಷ ಮಂಜುನಾಥ್ ಸತೀಶ್, ಶ್ರೀಧರ್, ಕಿರಣ್‌ಕುಮಾರ್, ವಿನಯ್‌ಕುಮಾರ್, ತಿಪ್ಪೇಶ್, ವೇದಿಕೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ವಾಹನ ಸವಾರರು ಸಂಚಾರಿ ನಿಯಮ ಕಡ್ಡಾಯವಾಗಿ ಪಾಲಿಸಿ: ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ

» **ದಾವಣಗೆರೆ**

ಏಕಮುಖ ರಸ್ತೆ, ಸಿಗ್ನಲ್ ಜಂಪ್, ಪಾರ್ಕಿಂಗ್ ಇಲ್ಲದ ಜಾಗದಲ್ಲಿ ಪಾರ್ಕಿಂಗ್ ಮಾಡಿದ ವಾಹನ ಸವಾರರಿಗೆ ದಂಡದ ಜೊತೆಗೆ ಕಠಿಣ ಕಾನೂನು ಕ್ರಮ ಜರುಗಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದರು.




ಸೋಮವಾರ(ಡಿ.9) ರಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಗರದಲ್ಲಿ ಪಾರ್ಕಿಂಗ್ ವ್ಯವಸ್ಥೆ, ಘೋಷಿತ ವ್ಯಾಪಾರ ಪ್ರದೇಶ ಹಾಗೂ ನಿರ್ಭಂದಿತ ವ್ಯಾಪಾರ ಪ್ರದೇಶ, ಮತ್ತು ವಾಹನ ಸಂಚಾರ ನಿಯಮಗಳ ಪಾಲನೆ ಕುರಿತು ಆಯೋಜಿಸಲಾಗಿದ್ದ ಸಭೆಯ ಅಧ್ಯಕ್ಷತೆವಹಿಸಿ ಮಾತಾನಾಡಿದರು. ಸರ್ಕಾರ ಡೀಸೆಲ್ ಮಾದರಿ ಹಾಗೂ ಇತರೆ ಮಾದರಿಯ ವಾಹನಗಳ ಎಫ್.ಸಿ ಮುಗಿದರೂ ವಾಹನಗಳು ವಿಲೇವಾರಿಗೆ ಬರುತ್ತಿಲ್ಲ ಏಕೆ? ಪಾರ್ಕಿಂಗ್‌ನಲ್ಲಿ ನಿಲ್ಲದೇ ಇರುವ ಕನಿಷ್ಠ 100 ವಾಹನಗಳನ್ನಾದರೂ ತಡೆದು ದಂಡ ವಿಧಿಸಿ, ಗಾಡಿಗಳನ್ನು ಜಾಪ್ತಿ ಮಾಡಿ ಎಂದು ಆರ್ ಟಿ ಓ ಅಧಿಕಾರಿಗಳಿಗೆ ಸೂಚಿಸಿದರು.

ಟ್ರಾಕ್ಟರ್ ಸಿಟಿ ಒಳಗಡೆ ಬರುತ್ತಿವೆ, ಅಂತಹ ಟ್ರ್ಯಾಕ್ಟರ್ ಮೇಲೆ ಕೂಡಲೇ ಕೇಸ್ ಮಾಡಿ, ಲಾರಿಗಳು ನಗರದ ಒಳಗಡೆ ಪ್ರವೇಶಸಲು ಸಮಯ ನಿಗಧಿಮಾಡಬೇಕು. ಸಿ.ಜಿ ಆಸ್ಪತ್ರೆಯ ಸುತ್ತಮುತ್ತ, ಹೈಸ್ಕೂಲ್ ಮೈದಾನದ ಹತ್ತಿರ ಪಾರ್ಕಿಂಗ್ ವ್ಯವಸ್ಥೆ ಮಾಡಬೇಕು. ದನಕರುಗಳು ರಸ್ತೆಯಲ್ಲಿ ಓಡಾಡುತ್ತಿವೆ. ಇದರಿಂದ ವಾಹನ ಸವಾರರಿಗೆ ತುಂಬಾ ತೊಂದರೆಯಾಗಿ ಅಪಘಾತಗಳು ಸಹ ಹೆಚ್ಚುತ್ತಿವೆ. ನಗರದಲ್ಲಿ ವಾಹನಗಳ ಪಾರ್ಕಿಂಗ್ ಸಮಸ್ಯೆ ಹೆಚ್ಚಾಗಿದ್ದು, ಹಾಗಾಗಿ ರಸ್ತೆ ಸಾಲದೆ ಫುಟ್ ಬಾತ್ ಮೇಲೂ ವಾಹನಗಳನ್ನು ನಿಲುಗಡೆ ಮಾಡಲಾಗುತ್ತಿದೆ.

ಕಟ್ಟಡ ನಿರ್ಮಾಣ ಸಾಮಗ್ರಿಗಳಾದ ಎಂ.ಸ್ಯಾಂಡ್, ಮರಳು, ಸಿಮೆಂಟ್, ಇಟ್ಟಿಗೆಗಳನ್ನು ಸಾಗಾಣಿಕೆ ಮಾಡುವ ಭಾರಿ ವಾಹನ, ಲಘು ವಾಹನ, □□□□□□ಳಕ್ಟರ್‌ಗಳು ಮೇಲು ಹೊದಿಕೆಯನ್ನು ಹಾಕಿಕೊಳ್ಳದೆ ವಾಹನಗಳನ್ನು ಚಾಲನೆ ಮಾಡುವ ಕಾರಣ ಈ ವಾಹನಗಳ ಹಿಂಭಾಗ ಚಾಲನೆ ಮಾಡುವ ದ್ವಿಚಕ್ರ ವಾಹನ ಚಾಲಕರ ಕಣ್ಣಿಗೆ ದೂಳು, ಮಣ್ಣಿನ ಕಣಗಳು, ಕಲ್ಲಿನ ಕಣಗಳು ಬಿದ್ದು ಅಪಘಾತಗಳು ಸಂಭವಿಸುತ್ತಿರುವ ಕಾರಣ ಸಂಚಾರ ಪೊಲೀಸ್ ಅಧಿಕಾರಿಗಳು ಇಂತಹ ವಾಹನಗಳ ಮೇಲೆ ದಂಡ ವಿಧಿಸುವುದು ಹಾಗೂ ಸಂಬಂಧಪಟ್ಟ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ನಿರ್ಧಾಕ್ಷಿಣ್ಯ ಕಾನೂನು ಕ್ರಮಗಳನ್ನು ಕೈಗೊಳ್ಳಬೇಕು.

ಖಾಸಗಿ ಬಸ್, ಭಾರಿ ವಾಹನಗಳು, ಕೆಲವು ಶಾಲಾ-ಕಾಲೇಜು ಬಸ್ಸುಗಳು ಆಟೋರಿಕ್ಷಾ ವಾಹನಗಳು ಕರ್ಕಶ ಹಾರನ್‌ಗಳನ್ನುಅಳವಡಿಸಿಕೊಂಡುಚಾಲನೆ ಮಾಡುವುದರಿಂದ ನಗರದ ನಾಗರಿಕರಿಗೆ ಹಾಗೂ ಆಸ್ಪತ್ರೆಗಳ ಪ್ರದೇಶದಲ್ಲಿ ಶಬ್ದ ಮಾಲಿನ್ಯವು ಹೆಚ್ಚಾಗುತ್ತಿರುವ ಹಿನ್ನಲೆಯಲ್ಲಿ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳು ಅಂತಹ ವಾಹನ ಚಾಲಕರ ಮೇಲೆ ದಂಡ ವಿಧಿಸಬೇಕು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಮಾತಾನಾಡಿ ಚಾಮರಾಜಪೇಟೆ, ಮಂಡಿಪೇಟೆ, ಚೌಕಿಪೇಟೆ ಸುತ್ತಮುತ್ತ ಪ್ರದೇಶಗಳಲ್ಲಿ ಪಾರ್ಕಿಂಗ್ ವ್ಯವಸ್ಥೆಯಲ್ಲಿ ತುಂಬಾ ತೊಂದರೆಯಾಗುತ್ತಿದೆ. ಹದಡಿ ರೋಡ್ ನಲ್ಲಿ ಜಕಾತಿ ಕ್ಯಾನ್ಸಲ್ ಆಗಿರುವುದರಿಂದ ಸಣ್ಣ ಸಣ್ಣ ಅಂಗಡಿಗಳು, ತರಕಾರಿ , ಹಣ್ಣಿನ ಅಂಗಡಿಗಳು ತುಂಬಾ ಜಾಸ್ತಿಯಾಗಿರುತ್ತದೆ. ಮಂಡಿಪೇಟೆ ಸುತ್ತಮುತ್ತ ತುಂಬಾ ಅಂಗಡಿಗಳು ಆಗಿರುವುದರಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗಿದೆ. ನಿಷೇಧಿತ ಪ್ರದೇಶದಲ್ಲಿ ವಾಹನ ನಿಲುಗಡೆ ಮಾಡಿದರೆ, ಪೊಲೀಸರು ದಂಡ ವಿಧಿಸಿ, ಸಿ.ಸಿ.ಟಿವಿ ಕ್ಯಾಮೆರಾಗಳ ಮೂಲಕ ದಂಡದ ನೋಟಿಸ್ ಕೂಡ ವಾಹನ ಮಾಲೀಕರಿಗೆ ರವಾನೆಯಾಗುತ್ತಿದೆ. ಬಸ್ ಸರ್ವಿಸ್ ರಸ್ತೆಯಲ್ಲಿ ದ್ವಿಚಕ್ರ ವಾಹನಗಳು, ಆಟೋ, ಟ್ಯಾಕ್ಸಿಗಳು ಅಡ್ಡಾದಿಡ್ಡಿಯಾಗಿ ನಿಲ್ಲಿಸಿರುವುದರಿಂದ ವಾಹನ ಸವಾರರು ಪಾದಚಾರಿಗಳು ಸುಗಮವಾಗಿ ಓಡಾಡಲು ಕಿರಿಕಿರಿ ಉಂಟಾಗುತ್ತಿದೆ. ಆಟೋಗಳಲ್ಲಿ ಹೆಚ್ಚು ಜನರನ್ನು ಕರೆದುಕೊಂಡು ಹೋಗುತ್ತಿದ್ದಾರೆ, ಕೂಡಲೇ ಅವರಿಗೆ ದಂಡ ವಿಧಿಸಿ ಹಾಗೂ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಕ್ರಮಕೈಗೊಳ್ಳಬೇಕು. ಸಿಗ್ನಲ್ ಜಂಪ್ ಮಾಡುತ್ತಿರುವ ವಾಹನ ಸವಾರರ ಮೇಲೆ ಕಾನೂನು ಕ್ರಮ ಮಾಡದ ಪೊಲೀಸರಿಗೆ ಎಚ್ಚರಿಕೆ ನೀಡಿದರು.

ಮಹಾನಗರ ಪಾಲಿಕೆ ವ್ಯಾಪ್ತಿಯ ಅಕ್ತರ್‌ರಜ್ಹಾ ಸರ್ಕಲ್‌ನಿಂದ ಬಾಡಾ ಕ್ರಾಸ್‌ವರೆಗೆ ವರ್ತುಲ ರಸ್ತೆಯ ಕಾಮಾಗಾರಿಯನ್ನು ಮಾಡುವುದರಿಂದ ನಗರದ ಹೊರವಲಯದಲ್ಲಿ ಭಾರಿ ವಾಹನಗಳು ಸಂಚಾರ ಮಾಡುವುದರಿಂದ ನಗರದಲ್ಲಿನ ಹಗಲು ವೇಳೆ ವಾಣಿಜ್ಯ ಸಂಕೀರ್ಣಗಳು ಇರುವ ರಸ್ತೆಗಳ ಸಂಚಾರ ದಟ್ಟಣೆಯನ್ನುಕಡಿತಗೊಳಿಸಿದಂತಾಗುತ್ತದೆ. ಮಂಡಿಪೇಟೆಯಲ್ಲಿ ತರಕಾರಿಯವರು ತುಂಬಾ ಕಸವನ್ನು ಜಾಸ್ತಿ ಮಾಡುತ್ತಿದ್ದು, ಕಸ ತೆಗೆಯಲು ತುಂಬಾ ಕಷ್ಟವಾಗಿರುತ್ತದೆ ಎಂದು ಪಾಲಿಕೆ ಆಯುಕ್ತೆ ತಿಳಿಸಿದರು.

ಬಾಡಾ ಕ್ರಾಸ್, ಮಾಗನಹಳ್ಳಿ ಕ್ರಾಸ್, ಮಹಾನಗರಪಾಲಿಕೆ, ತರಳಬಾಳು ಶಾಲೆ, ಎಸ್ ಎಸ್.ಆಸ್ಪತ್ರೆಯ ಹತ್ತಿರ ಬೀದಿ ದೀಪದ ಬೆಳಕು ಕೂಡ ಇರುವುದಿಲ್ಲ. ಹಾಗೂ ನಾಯಿಗಳು ನಗರದಲ್ಲಿ ತುಂಬಾ ಜನರಿಗೆ ಕಚ್ಚುತ್ತಿವೆ, ಅವುಗಳನ್ನು ಸೂಕ್ತ ಜಾಗದಲ್ಲಿ ಇರಿಸಬೇಕು ಎಂದು ಪಾಲಿಕೆಯ ಸ್ಥಾಯಿ ಸಮಿತಿಯ ಸದಸ್ಯರು ತಿಳಿಸಿದರು.

ಪಾಲಿಕೆಯ ಮಹಾಪೌರರಾದ ಚಮನ್ ಸಾಬ್.ಕೆ, ಉಪಮಹಾಪೌರರಾದ ಸೋಗಿ ಶಾಂತಕುಮಾರ್, ಹೆಚ್ಚುವರಿ ಪೊಲೀಸ್ ಅಧಿಕಾರಿ ವಿಜಯಕುಮಾರ್ ಎಂ. ಸಂತೋಷ್, ಮಂಜುನಾಥ, ಸ್ಮಾರ್ಟ್ ಸಿಟಿ ವ್ಯವಸ್ಥಾಪಕಿ ನಿರ್ದೇಶಕ ವೀರೇಶ್, ಆರ್.ಟಿ.ಓ ಅಧಿಕಾರಿ ಪ್ರಮುತೇಶ್, ಪಾಲಿಕೆ ವಿರೋಧ ಪಕ್ಷದ ನಾಯಕರಾದ ಪ್ರಸನ್ನಕುಮಾರ್, ಸ್ಥಾಯಿ ಸಮಿತಿ ಸದಸ್ಯರು ಹಾಗೂ ಉಪಸ್ಥಿತರಿದ್ದರು..

# ಡಿ. 14ರಂದು ಮಾದಿಗ ವಕೀಲರ ಸಮಾವೇಶ

» **ಚಿತ್ರದುರ್ಗ**

ಒಳ ಮೀಸಲಾತಿಯನ್ನು ಜಾರಿ ಮಾಡುವಂತೆ ಸರ್ಕಾರದ ಮೇಲೆ ಒತ್ತಡವನ್ನು ತರುವ ಸಲುವಾಗಿ ಚಿತ್ರದುರ್ಗ ನಗರದಲ್ಲಿ ರಾಜ್ಯ ಮಟ್ಟದ ಮಾದಿಗ ವಕೀಲರ ಸಮಾವೇಶವನ್ನು ಡಿ. 14 ರ ಶನಿವಾರ ಬೆಳಿಗ್ಗೆ 10.30ಕ್ಕೆ ನಗರದ ತರಾಸು ರಂಗಮಂದಿರದಲ್ಲಿ ಕರ್ನಾಟಕ ಸಾಮಾಜಿಕ ನ್ಯಾಯಪರ ವಕೀಲರ ವೇದಿಕೆವತಿಯಿಂದ ಹಮ್ಮಿಕೊಂಡಿರುವುದಾಗಿ ನ್ಯಾಯಾವಾದಿಗಳಾದ ಅರುಣ್ ಕುಮಾರ್ ತಿಳಿಸಿದ್ದಾರೆ.



ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆಗಸ್ಟ್ 1, 2024ರಂದು ಪರಿಶಿಷ್ಟ ಜಾತಿ ಪಂಗಡಗಳಲ್ಲಿ ಒಳಮೀಸಲಾತಿ ಕಲ್ಪಿಸಲು ಆಯಾಯ ರಾಜ್ಯಗಳಿಗೆ ಅಧಿಕಾರ ಇದೆಯೆಂದು ಏಳು ನ್ಯಾಯಮೂರ್ತಿಗಳ ಸಾಂವಿಧಾನಿಕ ಪೀಠದಿಂದ ಐತಿಹಾಸಿಕ ತೀರ್ಪು ಹೊರಬಂದಿರುವುದು ತುಳಿತಕ್ಕೊಳಗಾದ ಶೋಷಿತ ವರ್ಗಗಳಿಗೆ ಶಿಕ್ಷಣ, ಉದ್ಯೋಗ ಹಾಗೂ ಇತರೆ ಸೌಲಭ್ಯಗಳನ್ನು ಪಡೆಯಲು ಒಂದು ರಹದಾರಿ . ಈಗಾಗಲೇ ಕರ್ನಾಟಕ ರಾಜ್ಯದಲ್ಲಿ ಒಳಮೀಸಲಾತಿಗಾಗಿ 30 ವರ್ಷಗಳಿಂದ ಹೋರಾಟ ನಡೆಯುತ್ತಿದ್ದು. ಈ ಹೋರಾಟದಲ್ಲಿ ಹಲವರು ತಮ್ಮ ಬದುಕನ್ನು ತ್ಯಾಗ ಮಾಡಿದ್ದರೆ, ಮತ್ತೆ ಕೆಲವರು ಪ್ರಾಣತ್ಯಾಗ ಮಾಡಿರುತ್ತಾರೆ ಎಂಬುದು ತಮಗೆ ತಿಳಿದಿರುವ ಸಂಗತಿಯಾಗಿದೆ ಎಂದರು.

ಸುಪ್ರೀಂಕೋರ್ಟ್ ನ್ಯಾಯಮೂರ್ತಿಗಳಾದಡಿ. ವೈ.ಚಂದ್ರಚೂಡ್ ಮತ್ತು ಉಳಿದ 6 ಜನ ನ್ಯಾಯಮೂರ್ತಿ ಗಳಾದ ಬಿ.ಆರ್.ಗವಾಯಿ, ವಿಕ್ರಮ್ ನಾಥ್, ಬೇಲಾ ಎಂ.ತ್ರಿವೇದಿ, ಪಂಕಜ್ ಮಿಥಾಲ್, ಮನೋಜ್ ಮಿಶ್ರಾ ಮತ್ತು ಸತೀಶ್ ಚಂದ್ರಶರ್ಮ ಒಳಗೊಂಡಂತೆ 6:1ರ ಅನುಪಾತದಲ್ಲಿ ಪರಿಶಿಷ್ಟ ಜಾತಿಗಳಿಗೆ ಉಪವರ್ಗೀಕರಣ ಮಾಡಬಹುದೆಂದು ಆಯಾಯಾ ರಾಜ್ಯಗಳಿಗೆ ತೀರ್ಪನ್ನು ನೀಡಿರುತ್ತಾರೆ. ಹಿಂದೆ ಇದ್ದ ಕಾಂಗ್ರೆಸ್ ನೇತೃತ್ವದ ಸರ್ಕಾರ ಸದಾಶಿವ ಆಯೋಗವನ್ನು ರಚಿಸಿ ನ್ಯಾ. ಸದಾಶಿವರವರ ನೇತೃತ್ವದಲ್ಲಿ ಸತತ 7 ವರ್ಷಗಳ ಕಾಲ 20 ಲಕ್ಷದ 54 ಸಾವಿರ ಕುಟುಂಬಗಳನ್ನು ವೈಜ್ಞಾನಿಕ ಸಮೀಕ್ಷೆಗೊಳಪಡಿಸಿ ನಂತರ 2012ರಲ್ಲಿ ಆಯೋಗದ ವರದಿಯನ್ನು ಅಂದಿನ ಮುಖ್ಯಮಂತ್ರಿಗಳಾದ ಸದಾನಂದಗೌಡರಿಗೆ ಸಲ್ಲಿಸಿತು. ಪರಿಶಿಷ್ಟರ ನೂರೊಂದು ಜಾತಿಗಳಲ್ಲಿ ಮಾದಿಗ-ಮಾದಿಗ ಸಹಸಂಬಂಧಿತ ಜಾತಿಗಳಿಗೆ ಶೇ.6ರಷ್ಟು, ಹೊಲೆಯ ಸಹಸಂಬಂಧಿತ ಜಾತಿಗಳಿಗೆ ಶೇ.5ರಷ್ಟು, ಸ್ಪೃಶ್ಯ ಜಾತಿಗಳಾದ ಕೊರಮ, ಕೊರಚ, ಬೋವಿ, ಲಂಬಾಣಿಗಳಿಗೆ ಶೇ.3ರಷ್ಟು, ಅಲೆಮಾರಿ ಅಸ್ಪೃಶ್ಯ ಜಾತಿಗಳಿಗೆ ಶೇ.1ರಷ್ಟನ್ನು ಜನಸಂಖ್ಯಾ ಆಧಾರಿತವಾಗಿ ಒಳಮೀಸಲಾತಿ ಕಲ್ಪಿಸಿದೆ. ಸುಪ್ರೀಂಕೋರ್ಟ್ ಆಗಸ್ಟ್ 1, 2024ರಂದು ನೀಡಿದ ಆದೇಶದನ್ವಯ ಕರ್ನಾಟಕ ಸರ್ಕಾರವು ದಿನಾಂಕ: 28.10.2024ರಂದು ಸಚಿವ ಸಂಪುಟ ಸಭೆಯಲ್ಲಿ ಎಂಪೇರಿಕಲ್ ಡಾಟಾ ಸಂಗ್ರಹ ಮಾಡಲು ಏಕಸದಸ್ಯ ಆಯೋಗವನ್ನು ರಚಿಸಿ ನಿವೃತ್ತ ನ್ಯಾ. ಹೆಚ್.ಎನ್.ನಾಗಮೋಹನ್‌ದಾಸ್ ಅವರನ್ನು ಆಯೋಗಕ್ಕೆ ನೇಮಿಸಿತು. ಮುಂದುವರೆದು ಹೊರಡಿಸಿದ್ದು ಈ ಕಾರ್ಯಸೂಚಿಗೆ ತಕ್ಕಂತೆ ನಾವು ನಮ್ಮ ಸಮಾಜವನ್ನು ಸಿದ್ಧಗೊಳಿಸಿ ಆಯೋಗಕ್ಕೆ ತಕ್ಕ ಸಮಂಜಸ ಮಾಹಿತಿ ಒದಗಿಸಲು ತುರ್ತಾಗಿ ಸಜ್ಜಾಗಬೇಕಾಗಿದೆ. ಈ ಮಹತ್ತರ ಉದ್ದೇಶದ ಹಿನ್ನೆಲೆಯಿಂದ ಮಾದಿಗ ಸಮಾಜವನ್ನು ಜಾಗೃತಿಗೊಳಿಸಿ, ಒಳಮೀಸಲಾತಿಯನ್ನು ಸರ್ಕಾರ ಅತೀ ಶೀಘ್ರವಾಗಿ ಜಾರಿಗೊಳಿಸಲು ಸನ್ನದ್ಧಗೊಳಿಸುವ ಸಲುವಾಗಿ ಚಾಮರಾಜನಗರ ಗಡಿಜಿಲ್ಲೆಯಿಂದ ಬೀದರ್ ಜಿಲ್ಲೆಯ ಮತ್ತತುದಿಯವರೆಗೂ ಒಳಮೀಸಲಾತಿಯನ್ನು ಪಡೆಯುವ ಸಲುವಾಗಿ ಇದೇ ಡಿಸೆಂಬರ್ 14, 2024ರಂದು ಚಿತ್ರದುರ್ಗ ಜಿಲ್ಲೆಯಲ್ಲಿ ರಾಜ್ಯಮಟ್ಟದ ಮಾದಿಗ ವಕೀಲರ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

## ಮೀರಸಾಬಿಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ : ರಾಷ್ಟ್ರೀಯ ಜಂತುಹುಳು ನಿವಾರಣಾ ದಿನಾಚರಣೆ




» **ಚಳ್ಳಕೆರೆ**

ತಾಲ್ಲೂಕಿನ ಮೀರಸಾಬಿಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ರಾಷ್ಟ್ರೀಯ ಜಂತು ಹುಳು ನಿವಾರಣ ದಿನಾಚರಣೆಯನ್ನು ಆಚರಿಸಲಾಯಿತು. ಪ್ರಾಥಮಿಕ ಕೇಂದ್ರ ಆರೋಗ್ಯ ನಿರೀಕ್ಷಣಾಧಿಕಾರಿ ಸಿ.ಎನ್.ನವೀನ್‌ಕುಮಾರ್ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಶಾಲೆಯಮಕ್ಕಳುಪ್ರತಿಆರುತಿಂಗಳಿಗೊಮ್ಮೆಜಂತುಹುಳುನಿಯಂತ್ರಿಸುವ ಅಲ್ಬೆಂಡಾಜೋಲ್ ಮಾತ್ರೆಯನ್ನು ತೆಗೆದುಕೊಳ್ಳಬೇಕು. ಹೊಟ್ಟೆಯಲ್ಲಿ ಜಂತು ಕಾಣಿಸಿಕೊಂಡರೆ ಬಹುಬೇಗ ನಿತ್ರಾಣವಾಗಿ ಆರೋಗ್ಯದಲ್ಲಿ ಏರುಪೇರಾಗುತ್ತದೆ. ಪ್ರಾರಂಭದಲ್ಲೇ ಜಂತು ನಿವಾರಣೆ ಮಾಡಿದರೆ ಮಾತ್ರ ಮಕ್ಕಳು ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು ಎಂದರು. ಶಾಲೆಯ ಶಿಕ್ಷಕ ಲೋಕೇಶ್ ಮಾತನಾಡಿ, ಸರ್ಕಾರ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ಜೊತೆಗೆ ಉತ್ತಮ ಆರೋಗ್ಯವನ್ನು ಸಂರಕ್ಷಿಸಿಕೊಳ್ಳುವವ್ಯವಸ್ಥೆ ಮಾಡಿದೆ. ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು. ಆರೋಗ್ಯವಂತನಾದಲ್ಲಿ ಮಾತ್ರ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದರು. ಶಾಲಾ ಶಿಕ್ಷಕಿಯರಾದ ಮಂಜುಳಾ, ಮಾಲ, ಆಶಾಕಾರ್ಯಕರ್ತೆ ಸರೋಜಮ್ಮ, ರಾಧಮ್ಮ ಮುಂತಾದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

### ಅಖಿಲ ಭಾರತ ಗೃಹರಕ್ಷಕ ದಳ ದಿನಾಚರಣೆಯಲ್ಲಿ ಪೊಲೀಸ್ ಅಧೀಕ್ಷಕ ರಂಜಿತ್ ಕುಮಾರ್ ಬಂಡಾರು ಅಭಿಮತ

# ಗೃಹ ರಕ್ಷಕರು ಪೊಲೀಸ್ ಇಲಾಖೆ ಅವಿಭಾಜ್ಯ ಅಂಗ

» **ಚಿತ್ರದುರ್ಗ**

ನಿತ್ಯವೂ ಗೃಹರಕ್ಷಕ ದಳದವರಿಂದ ಪೊಲೀಸ್ ಇಲಾಖೆ ಸೇವೆ ಪಡೆಯುತ್ತಿದ್ದು, ಗೃಹರಕ್ಷಕರು ಪೊಲೀಸ್ ಇಲಾಖೆಗೆ ಪೂರಕ ಹಾಗೂ ಅವಿಭಾಜ್ಯ ಅಂಗವಾಗಿದ್ದಾರೆ ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕ ರಂಜಿತ್ ಕುಮಾರ್ ಬಂಡಾರು ಹೇಳಿದರು.



ನಗರದ ಜಿಲ್ಲಾ ಸಶಸ್ತ್ರ ಮೀಸಲು ಪಡೆ (ಡಿಎಆರ್) ಮೈದಾನದಲ್ಲಿ ಸೋಮವಾರ ಜಿಲ್ಲಾ ಗೃಹರಕ್ಷಕ ದಳ ವತಿಯಿಂದ ಹಮ್ಮಿಕೊಂಡಿದ್ದ "ಅಖಿಲ ಭಾರತ ಗೃಹರಕ್ಷಕ ದಳ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.

ಬಂದೋಬಸ್ತ್, ಚುನಾವಣೆ, ಪ್ರಕೃತಿ ವಿಕೋಪ ಹಾಗೂ ತುರ್ತು ಸಂದರ್ಭಗಳಲ್ಲಿ ಗೃಹ ರಕ್ಷಕ ದಳದವರ ಸಹಕಾರ ಪೊಲೀಸ್ ಇಲಾಖೆಗೆ ಅಗತ್ಯವಾಗಿ ಬೇಕಾಗಿದೆ. ಗೃಹ ರಕ್ಷಕರ ನಿಸ್ವಾರ್ಥ ಸೇವೆ ಮತ್ತು ಪೊಲೀಸ್ ಇಲಾಖೆಗೆ ನೀಡುವ ಸಹಕಾರ ಮುಂದುವರೆಯಲಿ ಎಂದು ಹೇಳಿದರು.

ಜಿಲ್ಲೆಯಲ್ಲಿ ಗೃಹರಕ್ಷಕರು ಬಹಳ ಬದ್ಧತೆಯಿಂದ ಕಾರ್ಯನಿರ್ವಹಿಸುತ್ತಿರುವುದನ್ನು ನಾನು ನೋಡಿದ್ದೇನೆ. ಈಚೆಗೆ ನಡೆದ ಗಣೇಶ ಬಂದೋಬಸ್ತ್ ಸಂದರ್ಭದಲ್ಲಿ ಗೃಹ ರಕ್ಷಕ ಗುರುಮೂರ್ತಿ ಅವರು ಹೃದಯದ ಸಮಸ್ಯೆಯಿಂದ ಮರಣ ಹೊಂದಿದರು. ಅವರಿಗೆ ವಹಿಸಿರುವ ಕರ್ತವ್ಯವನ್ನು ಸೈನಿಕರಂತೆ, ಬದ್ಧತೆಯಿಂದ ಕಾಯನಿರ್ವಹಿಸಿ ನಮ್ಮೆಲ್ಲರಿಗೂ ಸ್ಫೂರ್ತಿದಾಯಕವಾಗಿದ್ದಾರೆ ಎಂದು ತಿಳಿಸಿದ ಅವರು, ಗೃಹ ರಕ್ಷಕರು ಆರೋಗ್ಯದ ಕಡೆಗೂ ಕಾಳಜಿ ವಹಿಸಿಬೇಕು ಎಂದು ಸಲಹೆ ನೀಡಿದರು.

ಗೃಹ ರಕ್ಷಕರು ಸಹ ಇನ್ನೂ ಹೆಚ್ಚಿನ ಶಿಸ್ತು ಹೊಂದುವುದು ಅಗತ್ಯವಾಗಿದೆ. ಪ್ರತಿ ವಾರವೂ ನಡೆಯುವ ಪರೇಡ್ ತರಬೇತಿಯಲ್ಲಿ ಭಾಗವಹಿಸಿ, ಶ್ರದ್ದೆ ಹಾಗೂ ಶಿಸ್ತು ಬೆಳೆಸಿಕೊಳ್ಳಬೇಕು. ಪೊಲೀಸರಂತೆ ಗೃಹರಕ್ಷಕರು ಸಹ ಖಾಕಿ ಸಮವಸ್ತ್ರ ಧರಿಸುವುದರಿಂದ ಸಮವಸ್ತ್ರದಲ್ಲಿದ್ದಾಗ ಶಿಸ್ತು, ಪ್ರಾಮಾಣಿಕತೆ ಹಾಗೂ ಶ್ರದ್ಧೆಯಿಂದ ಕಾರ್ಯನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ಗೃಹರಕ್ಷಕ ದಳ ಜಿಲ್ಲಾ ಸಮಾದೇಷ್ಟರಾದ ಸಿ.ಕೆ.ಸಂಧ್ಯಾ ಮಾತನಾಡಿ, ಜಿಲ್ಲೆಯ ಗೃಹ ರಕ್ಷಕದಳವರು ಚುನಾವಣೆ ಹಾಗೂ ಇತರೆ ಬಂದೋಬಸ್ತ್‌ಗಳಿಗೆ ಮಹಾರಾಷ್ಟ್ರ ಸೇರಿದಂತೆ ಇತರೆ ರಾಜ್ಯಗಳಿಗೆ ತೆರಳಿ ಯಶಸ್ವಿಯಾಗಿ ಕಾರ್ಯನಿರ್ವಹಿಸಿದ್ದಾರೆ. ಇದರ ಜೊತೆಗೆ ತುರ್ತು ಸಂದರ್ಭಗಳಲ್ಲಿಯೂ ಸಹ ಉತ್ತಮ ಸೇವೆ ಸಲ್ಲಿಸಿದ್ದಾರೆ. ಪೊಲೀಸ್ ಇಲಾಖೆಯು ಗೃಹ ರಕ್ಷಕ ದಳಕ್ಕೆ ಸಂಪೂರ್ಣ ಸಹಕಾರ ನೀಡುತ್ತಿದ್ದು, ಉತ್ತಮ ಒಡನಾಡಿಯಾಗಿ ಕೆಲಸ ನಿರ್ವಹಿಸುತ್ತಿದ್ದೇವೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಗೃಹ ರಕ್ಷಕ ದಳದಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದವರಿಗೆ ಹಾಗೂ ರಕ್ತದಾನ ಮಾಡಿದ ಹಾಗೂ ಉತ್ತಮ ಸೇವೆ ಸಲ್ಲಿಸಿದ ಗೃಹ ರಕ್ಷಕರಿಗೆ ಸನ್ಮಾನಿಸಿ, ಗೌರವಿಸಲಾಯಿತು. ಗೃಹರಕ್ಷಕ ದಳ ಉಪ ಸಮಾದೇಷ್ಟರಾದ ಜಿ.ಹೆಚ್.ಲೋಕೇಶ್ ಅವರು ಪ್ರಮಾಣ ವಚನ ಬೋಧಿಸಿದರು. ಹಿರಿಯೂರು ಘಟಕಾಧಿಕಾರಿ ಹನುಮಂತರಾಯಪ್ಪ ವಾರ್ಷಿಕ ವರದಿ ಮಂಡಿಸಿದರು.

ಈಚೆಗೆ ನಿಧನರಾದ ಗೃಹ ರಕ್ಷಕ ಗುರುಮೂರ್ತಿ ಕುಟುಂಬ ವರ್ಗಕ್ಕೆ ಪೊಲೀಸ್ ಇಲಾಖೆಯಿಂದ ರೂ.1.50 ಲಕ್ಷ ಚೆಕ್‌ನ್ನು ಜಿಲ್ಲಾ ಪೊಲೀಸ್ ಅಧೀಕ್ಷಕ ರಂಜಿತ್ ಕುಮಾರ್ ಬಂಡಾರು ಅವರು ವಿತರಿಸಿದರು.

ಕಾರ್ಯಕ್ರಮದಲ್ಲಿ ಚಿತ್ರದುರ್ಗ ಉಪವಿಭಾಗದ ಪೊಲೀಸ್ ಉಪಾಧೀಕ್ಷಕ ದಿನಕರ್, ಗೃಹರಕ್ಷಕ ದಳ ಜಿಲ್ಲಾ ಸಮಾದೇಷ್ಟರಾದ ಸಿ.ಕೆ.ಸಂಧ್ಯಾ ಸೇರಿದಂತೆ ನಿವೃತ್ತ ಘಟಕಾಧಿಕಾರಿಗಳು, ವಿವಿಧ ತಾಲ್ಲೂಕಿನ ಗೃಹ ರಕ್ಷಕರು ಇದ್ದರು.



### ಭ್ರಷ್ಟ ಆಚಾರ ಎಂಬ ನಂಜು ದೇಹ - ಮನಸ್ಸು - ಸಮಾಜ - ಸರ್ಕಾರವನ್ನು ಸಂಪೂರ್ಣ ವ್ಯಾಪಿಸುವ ಮುನ್ನ.......

**ಡಿಸೆಂಬರ್ 9**

# ವಿಶ್ವ ಭ್ರಷ್ಟಾಚಾರ ವಿರೋಧಿ ದಿನ

## 2023ರ ಘೋಷಣೆ

" ಭ್ರಷ್ಟಾಚಾರದ ವಿರುದ್ಧ ವಿಶ್ವವನ್ನು ಒಗ್ಗೂಡಿಸುವಿಕೆ "ಇದರ ಆಚರಣೆ ಮತ್ತು ಆತ್ಮಾವಲೋಕನ ಈಗ ಅತ್ಯಂತ ಅವಶ್ಯಕವಾಗಿದೆ. ಕನಿಷ್ಠ ಭ್ರಷ್ಟಾಚಾರ ಮುಕ್ತ ದಿನವನ್ನಾದರೂ ಆಚರಿಸೋಣವೇ.....

ಅಂದರೆ ಪ್ರಾರಂಭಿಕ ಹಂತದಲ್ಲಿ ಒಂದು ದಿನ ಯಾವುದೇ ರೀತಿಯ ಭ್ರಷ್ಟಾಚಾರ ಮಾಡದೇ ಕೆಲಸ ನಿರ್ವಹಿಸುವುದು......

ಈ ವಿಷಯದಲ್ಲಿ ಸದ್ಯಕ್ಕೆ ವಿಶ್ವವನ್ನು ಮರೆತು ಭಾರತವನ್ನು ಮಾತ್ರ ನೋಡೋಣ.

ಭೂ ಪ್ರದೇಶದಲ್ಲಿ ಏಳನೆಯ ಸ್ಥಾನ, ಜನಸಂಖ್ಯೆಯಲ್ಲಿ ಮೊದಲನೆಯ ಸ್ಥಾನ, ಪ್ರಜಾಪ್ರಭುತ್ವ ದೇಶಗಳಲ್ಲಿ ಮೊದಲನೇ ಸ್ಥಾನ, ಅತ್ಯಂತ ದೊಡ್ಡ ಸಂವಿಧಾನ, ಬೃಹತ್ ಮತ್ತು ವೈವಿಧ್ಯಮಯ ಜನ ಸಂಸ್ಕೃತಿ ಹೀಗೆ ಇಲ್ಲಿನ ಸಾಮಾಜಿಕ ರಚನೆಯೇ ಅತ್ಯಂತ ವರ್ಣಮಯ. ಜೊತೆಗೆ ಜಾತಿ ಧರ್ಮ ಭಾಷೆ ಆಹಾರ ಉಡುಪು ಮನೋಭಾವ ಎಲ್ಲದರಲ್ಲೂ ಭಿನ್ನತೆ ಇದೆ. ಆದರೆ ಭ್ರಷ್ಟಾಚಾರ ಮಾತ್ರ ಬಹುಶಃ ಇಡೀ ದೇಶದಲ್ಲಿ ಏಕ ಪ್ರಕಾರವಾಗಿ ಚಲಾವಣೆಯಲ್ಲಿದೆ.

ಬಹಳ ವರ್ಷಗಳ ಹಿಂದೆ ಲಂಕೇಶ್ ಪತ್ರಿಕೆಯಲ್ಲಿ ಪ್ರಕಟವಾದ ಎಚ್.ಎಲ್. ಕೇಶವ ಮೂರ್ತಿ ಅವರ ಒಂದು ಸಣ್ಣ ಕಥೆ ಭ್ರಷ್ಟಾಚಾರದ ನಂಜು ಎಷ್ಟು ಆಳವಾಗಿದೆ ಎಂಬುದನ್ನು ವಿಡಂಬನಾತ್ಮಕವಾಗಿ ಸೂಚಿಸುತ್ತದೆ.

ಒಂದು ಊರಿನಲ್ಲಿ ವಿಪರೀತ ಭ್ರಷ್ಟಾಚಾರ ನಡೆಯುತ್ತಿರುತ್ತದೆ. ಪ್ರತಿಯೊಂದಕ್ಕೂ ಲಂಚ ಕೊಡಲೇ ಬೇಕಾಗಿರುತ್ತದೆ. ಇದರಿಂದ ರೋಸಿ ಹೋದ ಊರಿನ ಜನರೆಲ್ಲಾ ಸೇರಿ ಒಂದು ಸಭೆಯನ್ನು ಮಾಡಿ ತೀರ್ಮಾನಕ್ಕೆ ಬರುತ್ತಾರೆ. ಅದರ ಪ್ರಕಾರ ಹೇಗಿದ್ದರೂ ಲಂಚ ಎಂಬುದು ಬಹಿರಂಗ ಸತ್ಯ. ಅದನ್ನು ಒಪ್ಪಿಕೊಳ್ಳಲು ಸಂಕೋಚ ಏಕೆ. ಆದ್ದರಿಂದ ಇನ್ನು ಮುಂದೆ ಈ ಊರಿನಲ್ಲಿ ಯಾವುದೇ ಸರ್ಕಾರಿ ಕೆಲಸ ಆಗಬೇಕಾದರೆ ಸರ್ಕಾರ ನಿಗದಿಪಡಿಸಿದ ಅಧೀಕೃತ ಶುಲ್ಕದ ಜೊತೆಗೆ ಅನಧಿಕೃತ ಲಂಚದ ಹಣವನ್ನು ಇಂತಿಷ್ಟು ಎಂದು ನಿಗದಿ ಮಾಡಿ ಎಲ್ಲಾ ಕಚೇರಿಗಳಲ್ಲು ಒಂದು ದರ ಪಟ್ಟಿಯನ್ನು ಅಧೀಕೃತವಾಗಿಯೇ ತೂಗು ಹಾಕಲಾಗುತ್ತದೆ. ಆಗ ಎಲ್ಲರೂ ಸರ್ಕಾರ ನಿಗದಿ ಮಾಡಿದ ಹಣ ಮತ್ತು ಲಂಚ ಎರಡನ್ನೂ ಕೊಟ್ಟು ಕೆಲಸ ಮಾಡಿಸಿಕೊಂಡು ಹೋಗುತ್ತಿರುತ್ತಾರೆ. ಉದಾಹರಣೆಗೆ ಖಾತಾ ಮಾಡಿಸಲು 1000 ಹಣ ಅಧೀಕೃತವಾದರೆ ಲಂಚ 5000 ಅಂದರೆ ಒಟ್ಟು 6000 ಹಣ ಕೊಡುವುದು. ಇಲ್ಲಿ ಯಾವುದೇ ಚೌಕಾಸಿ ಇರುವುದಿಲ್ಲ.

ಹೀಗೆ ಕೆಲವು ವರ್ಷ ಎಲ್ಲಾ ಕೆಲಸ ಕಾರ್ಯಗಳು ಸುಗಮವಾಗಿ ನಡೆದುಕೊಂಡು ಹೋಗುತ್ತದೆ. ಕೆಲವು ವರ್ಷಗಳ ನಂತರ ಒಬ್ಬ ವ್ಯಕ್ತಿ ಅಧೀಕೃತ ಮತ್ತು ಅನಧಿಕೃತ ಎರಡೂ ಹಣ ಪಾವತಿಸಿದ ಅನಂತರವೂ ಕೆಲಸ ಆಗುವುದಿಲ್ಲ. ಮತ್ತೆ ಎಂದಿನಂತೆ ಬಹಳ ದಿನ ಅಲೆದಾಡಿಸುತ್ತಾರೆ. ಆಗ ಆ ವ್ಯಕ್ತಿ ಅಧಿಕಾರಿಯನ್ನು ನೇರವಾಗಿ ಕೇಳುತ್ತಾರೆ " ಸ್ವಾಮಿ ಸರ್ಕಾರದ ಫೀಜು ಮತ್ತು ಲಂಚ ಎರಡೂ ಕೊಟ್ಟ ನಂತರವೂ ನೀವು ಏಕೆ ನಮ್ಮ ಕೆಲಸ ಮಾಡಿಕೊಡುತ್ತಿಲ್ಲ " ಅದಕ್ಕೆ ಅಧಿಕಾರಿಯ ಉತ್ತರ " ಅಷ್ಟು ಮಾತ್ರ ಕೊಟ್ಟರೆ ಸಾಕೆ. ಅದರ ಮೇಲೆ ಇನ್ನೊಂದಿಷ್ಟು ಲಂಚ ಕೊಡಬೇಕು " ಅಂದರೆ ಲಂಚವೂ ಸಾಮಾನ್ಯವಾಗಿ ಮತ್ತಷ್ಟು ಬೇಡಿಕೆ ಇಡಲಾಗುತ್ತದೆ. ಭ್ರಷ್ಟಾಚಾರ ಎಂಬುದು ಒಂದು ನಂಜು ಇದ್ದಂತೆ.




ಅದು ನಿಧಾನವಾಗಿ ಹೆಚ್ಚಾಗುತ್ತಾ ಇಡೀ ದೇಹ ಆಕ್ರಮಿಸಿ ಕೊಳೆಯುವಂತೆ ಮಾಡುತ್ತದೆ. ಈಗ ಇದೇ ಭ್ರಷ್ಟಾಚಾರ ಇಡೀ ಭಾರತೀಯ ಸಮಾಜವೇ ಕೊಳೆಯುವಂತೆ ಮಾಡಿದೆ.

ಕೆಲವು ವರ್ಷಗಳ ಹಿಂದೆ ಸರ್ಕಾರಿ ಉದ್ಯೋಗ ಪಡೆಯಲು ಲಂಚ ನೀಡಬೇಕಾಗಿತ್ತು. ಆದರೆ ಇಂದು ಡೆತ್ ಸರ್ಟಿಫಿಕೇಟ್ ಗೂ, ಬರ್ತ್ ಸರ್ಟಿಫಿಕೇಟ್ ಗೂ ಲಂಚ ನೀಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಲಂಚವನ್ನು ಪರ್ಸೆಂಟೇಜ್ ಲೆಕ್ಕದಲ್ಲಿ ಪಡೆಯಲಾಗುತ್ತದೆ. ಕಡತ ವಿಲೇವಾರಿ ಮಾಡಲು ಲಂಚ ನೀಡಬೇಕಾಗಿದೆ.

ಇದರ ಪರಿಣಾಮ ಭಾರತದ ನಿಜವಾದ ಆತ್ಮಕ್ಕೆ ಧಕ್ಕೆಯಾಗಿದೆ. ಜನರ ದಕ್ಷತೆ ಪ್ರಾಮಾಣಿಕತೆಯೇ ಕುಸಿದಿದೆ. ಸಮಾಜ ಮತ್ತು ಸರ್ಕಾರದ ಮೇಲಿನ ನಂಬಿಕೆಯೇ ಇಲ್ಲವಾಗಿದೆ. ಭ್ರಷ್ಟಾಚಾರ ಮತ್ತು ಜಾತಿ ವ್ಯವಸ್ಥೆ ಭಾರತಕ್ಕೆ ಶಾಪವಾಗಿ ಪರಿಣಮಿಸಿದೆ.

ವಿಶ್ವ ಭ್ರಷ್ಟಾಚಾರದ ದಿನದಂದು ಅದರ ಮೂಲ ಸ್ವರೂಪವನ್ನು ಹುಡುಕುವ ಜವಾಬ್ದಾರಿ ನಮ್ಮ ಮೇಲಿದೆ. ಇದನ್ನು ಪಕ್ಷಾತೀತವಾಗಿ ಅವಲೋಕನ ಮಾಡಬೇಕು. ಇಲ್ಲದಿದ್ದರೆ ತಪ್ಪುಗಳ ಪ್ರಮಾಣದ ಮೇಲೆ ಭ್ರಷ್ಟಾಚಾರಿಗಳು ತಮ್ಮ ತಪ್ಪುಗಳನ್ನು ಸಮರ್ಥಿಸಿಕೊಂಡು ನಿರಂತರ ವಂಚಕರಾಗುತ್ತಾರೆ. ಮಾಧ್ಯಮಗಳು ಅವರಿಗೆ ಅನುಕೂಲಕರ ವೇದಿಕೆಯನ್ನು ಸೃಷ್ಟಿಸುತ್ತಾರೆ.........

ಮೊದಲನೆಯದಾಗಿ, ಕಾನೂನುಗಳ ಸಂಕೀರ್ಣತೆ ಭ್ರಷ್ಟಾಚಾರ ಹೆಚ್ಚಾಗಲು ಒಂದು ಪ್ರಮುಖ ಕಾರಣ. ಜನರನ್ನು ನಂಬದ ಅಧಿಕಾರಿಗಳು, ಅಧಿಕಾರಿಗಳನ್ನು ನಂಬದ ಜನರು ಒಟ್ಟು ಅನುಮಾನ ಪ್ರವೃತ್ತಿಯ ಸ್ವಾರ್ಥ ವ್ಯವಸ್ಥೆಯೇ ಕೆಟ್ಟ ಹಣದ ಹರಿವು ಹೆಚ್ಚಾಗಲು ಒಂದು ಸಾಧನವಾಗಿದೆ. ಅಧಿಕಾರಿಗಳ ಮತ್ತು ರಾಜಕಾರಣಿಗಳ ಶ್ರೇಣೀಕೃತ ಅಧಿಕಾರದ ಹಂಚಿಕೆ, ನಿಯಮಗಳ ಒಳಮರ್ಮವನ್ನು ತಮ್ಮ ಹಣದಾಹಕ್ಕೆ ಬಳಸಿಕೊಳ್ಳುವ ತಂತ್ರಗಾರಿಕೆ ಭ್ರಷ್ಟಾಚಾರ ಸಾರ್ವತ್ರಿಕವಾಗಲು ಕಾರಣವಾಗಿದೆ...

ಎರಡನೆಯದಾಗಿ, ದುಡಿದ ಹಣಕ್ಕಿಂತ ಭ್ರಷ್ಟ ಹಣ ಹೆಚ್ಚು ಸುಲಭವಾಗಿ ಸಿಗುತ್ತದೆ ಮತ್ತು ಆ ಹಣದಿಂದ ನಮ್ಮ ಐಹಿಕ ಸುಖ ಭೋಗಗಳನ್ನು ಸಂತೃಪ್ತಿ ಗೊಳಿಸಿಕೊಳ್ಳಬಹುದು ಎಂಬ ಅಭಿಪ್ರಾಯ ಈ ಆಧುನಿಕ ಕಾಲದಲ್ಲಿ ಬಲವಾಗಿ ಬೇರೂರಿದೆ. ಹಣದಿಂದಲೇ ಚುನಾವಣೆ ಗೆದ್ದು ಅಧಿಕಾರ ಹಿಡಿಯಬಹುದು ಮತ್ತು ಅದರಿಂದ ಮತ್ತಷ್ಟು ಹಣ ಮಾಡಿ ಅದೇ ಅಧಿಕಾರವನ್ನು ಉಳಿಸಿಕೊಳ್ಳಬಹುದು, ಸರ್ಕಾರಿ ಅಧಿಕಾರಿಗಳು ಸಂಬಳದಿಂದ ಸಾಧಿಸಲು ಸಾಧ್ಯವಾಗದ ಭವ್ಯ ಬಂಗಲೆ ಕಾರು ವಿದೇಶ ಪ್ರವಾಸ ತೋಟದ ಮನೆ ಅನುಕೂಲಕರ ವರ್ಗಾವಣೆ ಎಲ್ಲವೂ ಭ್ರಷ್ಟ ಹಣದಿಂದ ಪಡೆಯಬಹುದು ಎಂಬುದು ಹೆಚ್ಚು ವಾಸ್ತವವಾಗಿದೆ. ಅದಕ್ಕಾಗಿಯೇ ಹೆಚ್ಚು ಹೆಚ್ಚು ಹಣ ಮಾಡಲು ಯಾವುದೇ ದಾರಿಯನ್ನು ಕಂಡುಕೊಳ್ಳುತ್ತಾರೆ......

ಮೂರನೆಯದಾಗಿ, ಸಮಾಜದಲ್ಲಿ ಕುಸಿಯುತ್ತಿರುವ ಮಾನವೀಯ ಮೌಲ್ಯಗಳು, ಹೆಚ್ಚುತ್ತಿರುವ ಕೊಳ್ಳುಬಾಕ ಸಂಸ್ಕೃತಿ, ಹಣದಿಂದಲೇ ನಿರ್ಧಾರವಾಗುವ ನಮ್ಮ ಗೌರವ ಸ್ಥಾನಮಾನ, ಸಂಬಂಧಗಳು, ಆರೋಗ್ಯ ಶಿಕ್ಷಣ ಮುಂತಾದ ಸೇವೆಗಳು, ಕೊನೆಗೆ ದೇವರ ದರ್ಶನವನ್ನು ಸಹ ಹಣದಿಂದಲೇ ಮಾಡಬಹುದು ( ಪೂಜೆ ಪ್ರಾರ್ಥನೆ ಹೋಮ ಹವನ ) ಎಂಬ ಕಾರಣದಿಂದ ಜನರು ಹಣ ಮಾಡಲು ಭ್ರಷ್ಟ ಮಾರ್ಗಗಳನ್ನು ಹುಡುಕತೊಗಿದರು. ಅದು ಊಹೆಗೂ ನಿಲುಕದ ಹೊಸ ಹೊಸ ಆಯಾಮಗಳನ್ನು ಪಡೆಯಿತು. ಅದು ಎಷ್ಟೆಂದರೆ ಈಗ ಭ್ರಷ್ಟಾಚಾರದ ಮೂಲ ಹುಡುಕುವುದೇ ಸಾಧ್ಯವಿಲ್ಲ ಎನ್ನುವಂತಾಗಿದೆ......

ನಾಲ್ಕನೆಯದಾಗಿ ಮತ್ತು ಬಹುಮುಖ್ಯವಾಗಿ ಭಾರತೀಯ ಸಮಾಜದ ಜಾತಿ ವ್ಯವಸ್ಥೆ ಭ್ರಷ್ಟಾಚಾರದ ಮೂಲವಾಗಿ ಬೇರು ಬಿಟ್ಟಿದೆ. ಹೇಳಿಕೇಳಿ ಇದು ಪ್ರಜಾಪ್ರಭುತ್ವ ವ್ಯವಸ್ಥೆ. ಇಲ್ಲಿ ಬಹುಮತವೇ ಅತ್ಯಂತ ಪ್ರಮುಖವಾದುದು. ಜಾತಿಯ ಅಭಿಮಾನ ಅಂಧಕಾರ ಮತದಾರರನ್ನು ಕುರುಡಾಗಿಸಿದೆ. ಈ ಜಾತಿ ಪದ್ದತಿ ಭ್ರಷ್ಟಾಚಾರವನ್ನು ಸಮೃದ್ಧವಾಗಿ ಪೋಷಿಸುತ್ತಿದೆ. ಸಂಖ್ಯೆಯ ಪ್ರಬಲ ಜಾತಿಗಳು, ಅದಕ್ಕೆ ಪೂರಕ ಭ್ರಷ್ಟ ಹಣ ಒಟ್ಟು ವ್ಯವಸ್ಥೆಯನ್ನೇ ನಿಯಂತ್ರಿಸುತ್ತಿದೆ.....

ಭ್ರಷ್ಟಾಚಾರ ಕೇವಲ ಹಣ ಆಸ್ತಿ ಅಧಿಕಾರ ಎಂಬ ವಸ್ತು ರೂಪದಲ್ಲಿ ಮಾತ್ರ ಚಲಾವಣೆಯಲ್ಲಿಲ್ಲ. ಅದು ಮಾನಸಿಕವಾಗಿ ಕೂಡ ಕಾರ್ಯಾಚರಣೆಯಲ್ಲಿದೆ. ನಮ್ಮ ರಕ್ತ ಮೂಳೆ ಮಾಂಸ ಉಸಿರು ಹೃದಯ ಎಲ್ಲವನ್ನೂ ನಿಯಂತ್ರಿಸುವ ಮೆದುಳಿನಲ್ಲಿ ಭ್ರಷ್ಟಾಚಾರ ಅವಿತು ಕುಳಿತಿದೆ. ಅವಕಾಶ ಇಲ್ಲದಿದ್ದಾಗ ಅದು ಪ್ರಾಮಾಣಿಕ ಮುಖವಾಡ ತೊಡುತ್ತದೆ. ಒಮ್ಮೆ ಅವಕಾಶ ಸಿಕ್ಕರೆ ಎಲ್ಲಾ ಮೌಲ್ಯಗಳನ್ನು ಗಾಳಿಗೆ ತೂರಿ ರಾಕ್ಷಸ ರೂಪ ಪಡೆಯುತ್ತದೆ. ಎಲ್ಲಾ ಸಂಸ್ಕಾರ ಸಂಸ್ಕೃತಿಗಳನ್ನು ಆಪೋಶನ ತೆಗೆದುಕೊಳ್ಳುತ್ತದೆ. ಎಲ್ಲವನ್ನೂ ಸಮರ್ಥನೆ ಮಾಡಿಕೊಳ್ಳುವ ಭಂಡತನಕ್ಕೆ ಇಳಿಯುತ್ತದೆ......

ನಮ್ಮ ಸಹಜ ಸುಖ ಸಂತೋಷ ನೆಮ್ಮದಿಯ ಜೀವನಮಟ್ಟವನ್ನೇ ಈ ಭ್ರಷ್ಟಾಚಾರ ನಾಶ ಮಾಡುತ್ತಿದೆ. ಕೆಟ್ಟವರನ್ನು ಬಿಡಿ, ಕನಿಷ್ಠ ಒಳ್ಳೆಯವರು ಒಳ್ಳೆಯವರಾಗಿ ಬದುಕಲು ಸಹ ಈ ಭ್ರಷ್ಟಾಚಾರ ಅವಕಾಶ ನೀಡುತ್ತಿಲ್ಲ. ಇದು ಅತ್ಯಂತ ಅಪಾಯಕಾರಿ ಮತ್ತು ದುರಂತ.......

ಮನುಷ್ಯನ ಆತ್ಮ ಮತ್ತು ಮನಸ್ಸುಗಳನ್ನು ಶುದ್ಧೀಕರಿಸಿ ಅದರ ಮೂಲಕ ಸಮಾಜದ ಮೂಲ ಆಶಯವನ್ನು ಸಾಮೂಹಿಕವಾಗಿ ಪರಿವರ್ತಿಸಿದರೆ ಭ್ರಷ್ಟಾಚಾರ ಕಡಿಮೆ ಮಾಡುವ ಸಾಧ್ಯತೆ ಇದೆ. ಕೇವಲ ಕಠಿಣ ಕಾನೂನುಗಳಿಂದ ಭಾರತದಂತಹ ಬೃಹತ್ ದೇಶದಲ್ಲಿ ಭ್ರಷ್ಟಾಚಾರ ನಿಯಂತ್ರಿಸುವುದು ಸಾಧ್ಯವಿಲ್ಲ. ನೀರಿನಂತೆ ಭ್ರಷ್ಟಾಚಾರ ಕೂಡ ಸ್ಥಿತಿಸ್ಥಾಪಕತ್ವ ಗುಣವನ್ನು ಹೊಂದಿದೆ. ಅದು ಸಹಜವಾಗಿಯೇ ತನ್ನ ಸ್ಥಾನ ಸಂಬಂಧಗಳನ್ನು ಅವಶ್ಯಕತೆಗೆ ಅನುಗುಣವಾಗಿ ತಾನೇ ಹುಡುಕಿಕೊಳ್ಳುತ್ತದೆ.....

ಮಂತ್ರಿಗಳ ರಾಜೀನಾಮೆ, ಅಧಿಕಾರಿಗಳ ಮೇಲೆ ದಾಳಿ,

ಮತ್ತಷ್ಟು ಕಠಿಣ ಕಾನೂನು ಮುಂತಾದ ಯಾವುದೂ ಉಪಯೋಗವಿಲ್ಲ. ನೈತಿಕತೆ ಮತ್ತು ಮಾನವೀಯತೆಯ ಆಧಾರದ ಮೇಲೆ ಈ ಸಮಾಜವನ್ನು ಪುನರ್ ರೂಪಿಸಬೇಕಿದೆ. ಧಾರ್ಮಿಕ ಆಧ್ಯಾತ್ಮಿಕ ಗುರು ಪರಂಪರೆ ಆರೋಗ್ಯ ಸಮಾಜ ಸೇವೆ ಪತ್ರಿಕೋದ್ಯಮ ಸೇರಿ ಎಲ್ಲವೂ ಬಹುತೇಕ ಭ್ರಷ್ಟಗೊಂಡಿರುವಾಗ ಇದರ ನಿರ್ಮೂಲನೆ ತುಂಬಾ ಕಷ್ಟ. ಆದರೆ ಅಸಾಧ್ಯವಲ್ಲ. ಖಂಡಿತ ಕೆಟ್ಟ ಹಣದ ಮಹತ್ವ ಕಡಿಮೆಯಾಗಿ ಶ್ರಮದ ಪ್ರಾಮುಖ್ಯತೆ ಹೆಚ್ಚು ಮಾಡುವ ಮಾನವೀಯ ಮೌಲ್ಯಗಳನ್ನು ಹೆಚ್ಚು ಹೆಚ್ಚು ಪ್ರಚಾರ ಮಾಡಿದರೆ, ಸಾಮಾನ್ಯ ಜನರಾದ ನಾವುಗಳು ಹಣ ಅಧಿಕಾರಕ್ಕಿಂತ ಮನುಷ್ಯನ ನಿಜವಾದ ಮತ್ತು ಪ್ರಾಮಾಣಿಕ ವ್ಯಕ್ತಿತ್ವಕ್ಕೆ ಗೌರವ ಕೊಡುವ ಸರಳ ಮನೋಭಾವ ಪ್ರದರ್ಶಿಸಿದರೆ ಭ್ರಷ್ಟಾಚಾರ ಸಾಕಷ್ಟು ಕಡಿಮೆಯಾಗುತ್ತದೆ.....

ಅದಕ್ಕಾಗಿ ಒಂದು ಸರಳ ಸೂತ್ರ ದಯವಿಟ್ಟು ಅಳವಡಿಸಿಕೊಳ್ಳೋಣ.....


" ಒಳ್ಳೆಯವರ ಪ್ರೋತ್ಸಾಹ ಮತ್ತು ಜೊತೆ ಜೊತೆಗೆ ಕೆಟ್ಟವರ ತಿರಸ್ಕಾರ ಅಥವಾ ಅದು ಸಾಧ್ಯವಾಗದಿದ್ದರೆ ಕೆಟ್ಟವರ ನಿರ್ಲಕ್ಷ್ಯ " ಇದು ನಮ್ಮಿಂದ ಸಾಧ್ಯವಾದರೆ ಈ ಸಮಾಜದಲ್ಲಿ ಭ್ರಷ್ಟಾಚಾರ ಕಡಿಮೆ ಆಗುವ ಸಾಧ್ಯತೆ ಇದೆ. ನಮ್ಮ ಜಾತಿಯವನು, ನಮ್ಮ ಪಕ್ಷದವನು, ನಮ್ಮ ಧರ್ಮದವನು, ನಮ್ಮ ಊರಿನವನು ಎಂದು ಕಳ್ಳ ಸುಳ್ಳ ಜೈಲಿಗೆ ಹೋಗಿ ಬಂದವನನ್ನು, ರಾಜಿನಾಮೆ ಕೊಡುವವನನ್ನು ಅತ್ತು ಕರೆದು ಹೆಗಲ ಮೇಲೆ ಹೊತ್ತು ತಿರುಗಿದರೆ ಈ ಸಮಾಜದ ಅಧೋಗತಿ ತಡೆಯಲು ಯಾರಿಂದಲೂ ಸಾಧ್ಯವಿಲ್ಲ.....

ದಯವಿಟ್ಟು ಸ್ವಾಭಿಮಾನವನ್ನು ಮಾರಿಕೊಳ್ಳಬೇಡಿ.

ಅವನು ಯಾರೇ ಆಗಿರಲಿ. ಒಳ್ಳೆಯವನು ಮಾತ್ರ ನಮ್ಮವನು. ಅವನಿಗೆ ಮಾತ್ರ ನಮ್ಮ ಪ್ರೀತಿ ಪ್ರೋತ್ಸಾಹ ಬೆಂಬಲ ಮತ್ತು ನಮ್ಮ ಮತ........

ಆ ಬದಲಾವಣೆಯ ನಿರೀಕ್ಷೆಯಲ್ಲಿ ನಿಮ್ಮೊಂದಿಗೆ.....

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,
ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,
ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ,
ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ.
ಹೆಚ್.ಕೆ.
9844013068

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T